ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 69 RNI Number : KNKAN/25/A2770 17-03-2026 Tuesday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :69 ರಾಯಚೂರು 17-03-2026 ವಂಗಳವಾರ ಪುಟ 04 ಬೆಲೆ ರೂ.2/- ವೊ:8660146563

ವಿಶ್ವ ಗ್ರಾಹಕರ ದಿನಾಚರಣೆ 2026ರ ಕಾರ್ಯಕ್ರಮಕ್ಕೆ ಚಾಲನೆ

ಪರಿಸರ ಸಂರಕ್ಷಣೆಗೆ ಪ್ರತಿಯೊಬ್ಬರೂ ಕಾಳಜಿ ವಹಿಸಿ: ನ್ಯಾ.ಹೆಚ್.ಎ.ಸಾತ್ವಿಕ್

ರಾಯಚೂರು ಮಾರ್ಚ್ 16

ಗ್ರಾಹಕರ ಹಕ್ಕುಗಳ ಚಲಾವಣೆ ಜೊತೆಗೆ ಪ್ಲಾಸ್ಟಿಕ್ ಬಳಕೆಯನ್ನು ಕಡಿಮೆ ಮಾಡಬೇಕು. ಪರಿಸರ ಸಂರಕ್ಷಣೆಗೆ ಪ್ರತಿಯೊಬ್ಬರೂ ಕಾಳಜಿ ವಹಿಸಬೇಕೆಂದು ಹಿರಿಯ ಶ್ರೇಣಿ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಗೌರವಾನ್ವಿತ ಹೆಚ್.ಎ.ಸಾತ್ವಿಕ್ ಅವರು ಹೇಳಿದರು.

ಮಾರ್ಚ್ 16ರ ಸೋಮವಾರ ದಂದು ನಗರದ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಪಂಚಾಯತ್, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, ಕಾನೂನು ಮಾಪನ ಶಾಸ್ತ್ರ ಇಲಾಖೆ ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ವಿಶ್ವ ಗ್ರಾಹಕರ ದಿನಾಚರಣೆ 2026ರ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಪ್ಲಾಸ್ಟಿಕ್ ಬಳಕೆಯಲ್ಲಿ ರಾಯಚೂರಿನ ಸದರ್ ಬಜಾರ್ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಬೆಳೆಂಬೆಳೆಗೆ ಎಲ್ಲೆಂದರಲ್ಲಿ ರಾಶಿ ರಾಶಿಯ ಪ್ಲಾಸ್ಟಿಕ್ ನೋಡಬಹುದಾಗಿದೆ. ಇದನ್ನು ನಿಯಂತ್ರಿಸಲು ಕೇವಲ ಅಧಿಕಾರಿಗಳಿಂದ ಸಾಧ್ಯವಿಲ್ಲ. ಗ್ರಾಹಕರು ಸ್ವಯಂ ಪ್ರೇರಿತವಾಗಿ ಬಳಕೆಯನ್ನು ಕಡಿಮೆ ಮಾಡಬೇಕೆಂದರು.

ರಾಯಚೂರು ಜಿಲ್ಲೆದಂದ್ಯಾತ ಕೆಟ್ಟ ಎಣ್ಣೆಯಲ್ಲಿ ಮಿರ್ಚಿ, ಗೋಬಿ ಮಂಚೂರಿ ಸೇರಿದಂತೆ ಇತರೆ ಆಹಾರ ಪದಾರ್ಥಗಳನ್ನು ತಯಾರಿಸುತ್ತಿದ್ದು, ಇದರಿಂದಾಗಿ ಗ್ರಾಹಕರ ಆರೋಗ್ಯ ಮೇಲೆ ಪ್ರಭಾವ ಬೀರುತ್ತದೆ. ವ್ಯಾಪಾರಸ್ಥರು ಗ್ರಾಹಕರ ಆರೋಗ್ಯ ಕಡೆ ಗಮನಹರಿಸಬೇಕು. ಕೇವಲ ಲಾಭದ ಕಡೆ ಗಮನಹರಿಸಬಾರದು ಎಂದರು.



ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷರಾದ ಗೌರವಾನ್ವಿತ ಕೆ.ವಿ.ಸುರೇಂದ್ರ ಬಾಬು ಅವರು ಮಾತನಾಡಿ, ವ್ಯಾಪಾರಸ್ಥರು ವಸ್ತುಗಳಿಗೆ ನಿಗದಿತ ಬೆಲೆಗಿಂತ ಹೆಚ್ಚಿನ ದರ ಪಡೆಯುವಂತಿಲ್ಲ. ವಸ್ತುಗಳು ದೋಷದಿಂದ ಕೂಡಿದ್ದರೆ ಪ್ರಶ್ನೆ ಮಾಡುವ ಹಕ್ಕು ಗ್ರಾಹಕರಿಗಿದೆ. ಅವಧಿ ಮೀರಿದ ಉತ್ಪನ್ನಗಳನ್ನು ನೀಡಿದರೆ ಅಂತಹವರ ಮೇಲೆ ಗ್ರಾಹಕರ ಆಯೋಗದಲ್ಲಿ ಪ್ರಕರಣ ದಾಖಲಿಸಿ ಪರಿಹಾರ ಪಡೆಯಬಹುದು. ಜಿಲ್ಲಾ ಗ್ರಾಹಕರ ವ್ಯಾಜ್ಯ ಪರಿಹಾರ ಆಯೋಗ ಹಾಗೂ ರಾಜ್ಯ ಆಯೋಗದಲ್ಲಿ ಇತ್ತಿಷ್ಟು ಪರಿಹಾರ ಪಡೆಯಬಹುದಾಗಿದೆ. ಈ ನಿಟ್ಟನಲ್ಲಿ ಪ್ರತಿಯೊಬ್ಬರೂ ಗ್ರಾಹಕರ ಹಕ್ಕುಗಳನ್ನು ಅರಿಯಬೇಕು ಎಂದರು.

ಇಂದಿನ ದಿನಗಳಲ್ಲಿ ಸಾಕಷ್ಟು ಜನರು ವ್ಯಾಪಾರಕ್ಕಾಗಿ ಆನ್‌ಲೈನ್ ಮೊರೆ ಹೋಗುತ್ತಿರುವುದನ್ನು ಕಾಣಬಹುದು. ಅಂಗಡಿಗಳಿದ ವಸ್ತುಗಳನ್ನು ಕೊಳ್ಳುವುದಷ್ಟೇ ಅಲ್ಲ. ಬ್ಯಾಂಕಿಗ್ ಹಾಗೂ ವಿಮಾ ಸೌಲಭ್ಯಗಳನ್ನು ಪಡೆಯುವಲ್ಲಿ ಮೋಸ ಹೋಗದಂತೆ ಎಚ್ಚರ ವಹಿಸುವ ನಿಟ್ಟಿನಲ್ಲಿ ಈ ಬಾರಿಯ ವಿಶ್ವ ಗ್ರಾಹಕರ ದಿನವನ್ನು ಸುರಕ್ಷಿತ ಉತ್ಪನ್ನಗಳು ಆತ್ಮವಿಶ್ವಸದ ಗ್ರಾಹಕರು ಎಂಬ ಘೋಷವಾಕ್ಯದೊಂದಿಗೆ ಆಚರಿಸಲಾಗುತ್ತಿದೆ ಎಂದರು.

ಈ ವೇಳೆ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಸದಸ್ಯರಾದ ಗೌರವಾನ್ವಿತ ಪ್ರಭುದೇವ್ ಪಾಟೀಲ್ ಅವರು ಮಾತನಾಡಿ, ದೈನಂದಿನ ಜೀವನದಲ್ಲಿ ಪ್ರತಿಯೊಬ್ಬರೂ ಗ್ರಾಹಕರೇ. ಗ್ರಾಹಕರಿಗೆ ನ್ಯಾಯಯುತ, ಯೋಗ್ಯ ಹಾಗೂ ಗುಣಮಟ್ಟದ ಸರಕು ಮತ್ತು ಸೇವೆಗಳನ್ನು ನೀಡುವ ಜವಾಬ್ದಾರಿ ವ್ಯಾಪಾರಸ್ಥರದ್ದು. ಯಾವುದೇ ವಸ್ತುಗಳನ್ನು ಕೊಡುವವನ ತೃಪ್ತಿಗಾಗಿ ಕೊಳ್ಳುವುದಲ್ಲ, ಅಲ್ಲಿ ಗ್ರಾಹಕರ ಸಂತೃಪ್ತಿಯೇ ಮುಖ್ಯ. ಸುರಕ್ಷತೆ, ಆಯ್ಕೆ ಹಾಗೂ ಆರೋಗ್ಯಪೂರ್ಣ ಪರಿಸರ ಹೊಂದುವ ಹಕ್ಕನ್ನು ಕಾಯ್ದೆಯು ಎಲ್ಲ ಗ್ರಾಹಕರಿಗೂ ನೀಡಿದೆ ಎಂದರು.

ಅಡುಗೆ ಅನಿಲದ ಕೊರತೆ ಇಲ್ಲ: ಜಿಲ್ಲೆಯಲ್ಲಿ ಅಡುಗೆ ಅನಿಲದ ದಾಸ್ತಾನು ಹೇರಳವಾಗಿದ್ದು, ಸಾರ್ವಜನಿಕರು ಯಾವುದೇ ರೀತಿಯ ಆತಂಕಕ್ಕೆ ಒಳಗಾಗುವ ಅಗತ್ಯವಿಲ್ಲ. ಇತ್ತೀಚಿನ ದಿನಗಳಲ್ಲಿ ಸಾರ್ವಜನಿಕರು ಆತಂಕದಿದ ಅತಿಯಾಗಿ ಗ್ಯಾಸ್ ಬುಕಿಂಗ್ ಮಾಡುತ್ತಿರುವುದು ಕಂಡುಬದಿದೆ. ಇದರಿಂದಾಗಿ ವ್ಯವಸ್ಥೆ

ಮೂರನೇಯ ಪುಟಕ್ಕೆ

ಶಿವನಗೌಡ ನಾಯಕ ವಿರುದ್ಧದ ಶೂನ್ಯ ಎಫ್ಐಆರ್ ರದ್ದುಪಡಿಸಲು ಆಗ್ರಹ

ರದ್ದುಪಡಿಸದಿದ್ದರೆ ಜಿಲ್ಲಾದ್ಯಂತ ಉಗ್ರ ಹೋರಾಟ: ದಲಿತ ಸಂಘರ್ಷ ಸಮಿತಿ ಎಚ್ಚರಿಕೆ

ರಾಯಚೂರು, ಮಾ.16-

ಮಾಜಿ ಸಚಿವ ಕೆ. ಶಿವನಗೌಡ ನಾಯಕ ಅವರ ವಿರುದ್ಧ ದಾಖಲಾಗಿರುವ ಶೂನ್ಯ ಎಫ್ಐರ್ಆ ಅನ್ನು ತಕ್ಷಣವೇ ರದ್ದುಪಡಿಸಬೇಕು. ಇಲ್ಲವಾದರೆ ಜಿಲ್ಲೆಯಾದ್ಯಂತ ಉಗ್ರ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ದಲಿತ ಸಂಘರ್ಷ ಸಮಿತಿ ಜಿಲ್ಲಾ ಸಮಿತಿ ಎಚ್ಚರಿಕೆ ನೀಡಿದೆ.

ನಗರದ ಪತ್ರಿಕಾ ಭವನದಲ್ಲಿ ಸೋಮವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಜಿಲ್ಲಾ ಸಂಚಾಲಕ ಬಸವರಾಜ ನಕ್ಕುಂದಿ, ಚಿತ್ರದುರ್ಗದಲ್ಲಿ ನಡೆದ ದಲಿತ ಜನಾಂದೋಲನದ ಪೂರ್ವಭಾವಿ ಸಭೆಯಲ್ಲಿ ಎಸ್‌ಸಿ,ಎಸ್‌ಟಿ ಮೀಸಲಾತಿ ವಿಚಾರವಾಗಿ ಮಾತನಾಡಿದ ವೇಳೆ ಮಾಜಿ ಸಚಿವ ಶಿವನಗೌಡ ನಾಯಕ ಅವರ ಹೇಳಿಕೆಯನ್ನು ತಪ್ಪಾಗಿ ಅರ್ಥೈಸಿ ಶೂನ್ಯ ಎಫ್ಐಆರ್ ದಾಖಲಿಸಲಾಗಿದೆ ಎಂದು ಆರೋಪಿಸಿದರು.



ರಾಜ್ಯದಲ್ಲಿ ಎಸ್‌ಸಿ ಮತ್ತು ಎಸ್‌ಟಿ ಸಮುದಾಯಗಳಿಗೆ ಮೀಸಲಾದ ಅನುದಾನ ಹಾಗೂ ಉದ್ಯೋಗಾವಕಾಶಗಳಲ್ಲಿ ಅನ್ಯಾಯ ನಡೆಯುತ್ತಿದೆ ಎಂಬುದನ್ನು ಖಂಡಿಸಿ ಅವರು ಮಾತನಾಡಿದ್ದರು. ದಲಿತ ಸಮುದಾಯಕ್ಕೆ ನ್ಯಾಯ ದೊರಕಬೇಕು ಎಂಬ ಉದ್ದೇಶದಿಂದ ಹೇಳಿದ ಮಾತುಗಳನ್ನು ರಾಜಕೀಯವಾಗಿ ಬಳಸಿಕೊಂಡು ಪ್ರಕರಣ ದಾಖಲಿಸಿರುವುದು ಸರಿಯಲ್ಲ ಎಂದು ಹೇಳಿದರು.

ದಲಿತರ ಅಭಿವೃದ್ಧಿಗಾಗಿ ಮೀಸಲಾಗಿರುವ ಎಸ್‌ಸಿಪಿ, ಟಿಎಸ್‌ಪಿ ಅನುದಾನವನ್ನು ಬೇರೆ ಉದ್ದೇಶಗಳಿಗೆ ಬಳಸಲಾಗುತ್ತಿದೆ ಎಂಬ ಆರೋಪಗಳು ಕೇಳಿಬರುತ್ತಿವೆ. ಸರ್ಕಾರ ಈ ಕುರಿತು ಸ್ಪಷ್ಟನೆ ನೀಡಬೇಕು ಹಾಗೂ ದಲಿತ ಸಮುದಾಯಕ್ಕೆ ನ್ಯಾಯ ಒದಗಿಸಬೇಕು ಎಂದು ಅವರು ಒತ್ತಾಯಿಸಿದರು.

ಮಾಜಿ ಸಚಿವ ಶಿವನಗೌಡ ನಾಯಕ ಅವರು ಜಿಲ್ಲೆಯ ದಲಿತ ಸಮುದಾಯದ ಪ್ರಮುಖ ನಾಯಕರು. ಅವರ ವಿರುದ್ಧ ದಾಖಲಾಗಿರುವ ಶೂನ್ಯ ಎಫ್ಐರ್ಆ ಅನ್ನು ಸರ್ಕಾರ ತಕ್ಷಣವೇ ರದ್ದುಪಡಿಸಬೇಕು. ಇಲ್ಲವಾದರೆ ಜಿಲ್ಲೆಯಾದ್ಯಂತ ತೀವ್ರ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಸಿದರು.

ಸುದ್ದಿಗೋಷ್ಠಿಯಲ್ಲಿ ವೀರೇಶ ನಾಯಕ ಬೆಟ್ಟದೂರು, ಚಂದ್ರಶೇಖರ ನಾಯಕ, ಪರಶುರಾಮ ಬಾಗಲವಾಡ, ಅನೀಲ್ ಕುಮಾರ (ಮಾನವಿ), ಬಸವರಾಜ ಮಾನವಿ, ಮುದುಕಪ್ಪ ಜಡೆ ಸೇರಿದಂತೆ ಸಮಿತಿಯ ಮುಖಂಡರು ಉಪಸ್ಥಿತರಿದ್ದರು.



ವಿಷಪೂರಿತ ಕಲಬೆರಿಕೆ ಸೇಂಧಿ ಮಾರಾಟ ,63 ಲೀಟರ್ ಜಪ್ತಿ, ಆರೋಪಿ ಬಂಧನ

ರಾಯಚೂರು, ಮಾ.16-

ನಗರದ ಪಶ್ಚಿಮ ಪೊಲೀಸ್ ಠಾಣಾ ವ್ಯಾಪ್ತಿಯ ರೈಲ್ವೆ ನಿಲ್ದಾಣದ ಸಮೀಪದ ರೈಲ್ವೇ ಗಾರ್ಡನ್ ಮುಂಭಾಗ ಸಾರ್ವಜನಿಕ ರಸ್ತೆಯಲ್ಲಿ ಮಾನವ ಸೇವನೆಗೆ ಯೋಗ್ಯವಲ್ಲದ ಹಾಗೂ ಜೀವಕ್ಕೆ ಅಪಾಯಕಾರಿಯಾದ ವಿಷಪೂರಿತ ಸಿ.ಎಚ್. ಪೌಡರ್ ಮಿಶ್ರಿತ ಕಲಬೆರಿಕೆ ಸೇಂಧಿಯನ್ನು ಮಾರಾಟ ಮಾಡುತ್ತಿದ್ದ ವ್ಯಕ್ತಿಯ ಮೇಲೆ ಪೊಲೀಸರು ದಾಳಿ ನಡೆಸಿ 63 ಲೀಟರ್ ಸೇಂಧಿಯನ್ನು ಜಪ್ತಿ ಮಾಡಿ ಆರೋಪಿಯನ್ನು ಬಂಧಿಸಿದ್ದಾರೆ.

ದಿನಾಂಕ 13.03.2026 ರಂದು ಸಂಜೆ 4.30 ಗಂಟೆ ಸುಮಾರಿಗೆ ಬಂದ ಖಚಿತ ಮಾಹಿತಿಯ ಮೇರೆಗೆ ಪಶ್ಚಿಮ ಪೊಲೀಸ್ ಠಾಣೆಯ ಸಿಬ್ಬಂದಿ ದಾಳಿ ನಡೆಸಿದರು. ಪಂಚರಾದ ವಂಶಿ ಮತ್ತು ಮಹ್ಮದ್ ಹಾಜಿ ಅವರ ಸಮಕ್ಷಮದಲ್ಲಿ ಸಿಪಿಸಿ ಸಿಬ್ಬಂದಿಗಳಾದ ಚಂದ್ರಶೇಖರ್ (200), ಸುಖಮುನಿಯಪ್ಪ (168),

ಮೂರನೇಯ ಪುಟಕ್ಕೆ

ಪತ್ರಕರ್ತರ ಆರೋಗ್ಯ ವಿಮೆಗೆ ಪಾಲಿಕೆ ಬಜೆಟ್‌ನಲ್ಲಿ ಅನುದಾನ ಮೀಸಲಿಗೆ ಬೇಡಿಕೆ

ರಾಯಚೂರು, ಮಾ.16-

ನಗರದ ಪತ್ರಕರ್ತರ ಆರೋಗ್ಯ ಭದ್ರತೆ ಹಾಗೂ ತುರ್ತು ನೆರವಿಗಾಗಿ ರಾಯಚೂರು ಮಹಾನಗರ ಪಾಲಿಕೆಯ 2026 -27 ನೇ ಸಾಲಿನ ಬಜೆಟ್‌ನಲ್ಲಿ ವಿಶೇಷ ಅನುದಾನ ಮೀಸಲಿಡುವಂತೆ ರಾಯಚೂರು ರಿಪೋರ್ಟರ್ಸ್ ಗಿಲ್ಡ್ ಹಾಗೂ ಕಾರ್ಯನಿರತ ಪತ್ರಕರ್ತರ ಸಂಘದ ಪದಾಧಿಕಾರಿಗಳು ಮಹಾನಗರ ಪಾಲಿಕೆ ಆಯುಕ್ತರಾದ ಜುಬಿನ್ ಮಹಾಪಾತ್ರ ಅವರಿಗೆ ಸೋಮವಾರ ಪತ್ರಕರ್ತರ ಕಾರ್ಯನಿರ್ತರ ಸಂಘ ಹಾಗೂ ರಾಯಚೂರು ರಿಪೋರ್ಟರ್ ಗಿಲ್ಡ್ ವತಿಯಿಂದ ಮನವಿ ಸಲ್ಲಿಸಲಾಯಿತು.

ನಗರದಲ್ಲಿ ಕಾರ್ಯನಿರ್ವಹಿಸುತ್ತಿರುವ ಪತ್ರಕರ್ತರು ಸಾರ್ವಜನಿಕ ಸಮಸ್ಯೆಗಳನ್ನು ಬೆಳಕಿಗೆ ತರುವ ಮೂಲಕ ಸಮಾಜ ಹಾಗೂ ಆಡಳಿತದ ನಡುವೆ ಸಂಪರ್ಕ ಸೇತುವೆಯಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಇಂತಹ ಸಂದರ್ಭದಲ್ಲಿ ಪತ್ರಕರ್ತರ ಆರೋಗ್ಯ ರಕ್ಷಣೆಗೆ ಮಹಾನಗರ ಪಾಲಿಕೆ ಬಜೆಟ್‌ನಲ್ಲಿ ಅನುದಾನ ಮೀಸಲಿಟ್ಟು ಆರೋಗ್ಯ ವಿಮೆ ಯೋಜನೆಯನ್ನು ಜಾರಿಗೆ ತರಬೇಕು ಎಂದು ಮನವಿಯಲ್ಲಿ ತಿಳಿಸಲಾಗಿದೆ.



ಈ ಹಿಂದೆ ಮಹಾನಗರ ಪಾಲಿಕೆಯ ಸಾಮಾನ್ಯ ಸಭೆಯಲ್ಲಿ ಪತ್ರಕರ್ತರ ಆರೋಗ್ಯ ವಿಮೆಗಾಗಿ ರೂ.25 ಲಕ್ಷ ಅನುದಾನ ಮೀಸಲಿಡುವ ಕುರಿತು ತೀರ್ಮಾನ

ಮೂರನೇಯ ಪುಟಕ್ಕೆ

ದಿ. 30,31ರಂದು ಕರ್ನಾಟಕ ರೈತ ಸಂಘ 8 ನೇ ರಾಜ್ಯ ಸಮ್ಮೇಳನ

ರಾಯಚೂರು,ಮಾ.16

30,31 ಕರ್ನಾಟಕ ರೈತ ಸಂಘ 8ನೇ ರಾಜ್ಯ ಸಮ್ಮೇಳನ ನಗರದ ಅಯ್ಯಪ್ಪ ಸ್ವಾಮಿ ಕಲ್ಯಾಣ ಮಂಟಪದಲ್ಲಿ ಆಯೋಜಿಸಲಾಗಿದೆ ಎಂದು ಕರ್ನಾಟಕ ರೈತ ಸಂಘ ರಾಜ್ಯಾಧ್ಯಕ್ಷ ಡಿ.ಹೆಚ್.ಪೂಜಾರ ಹೇಳಿದರು.

ನಗರದ ಪತ್ರಿಕಾಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತ ನಾಡಿ, ಕಾರ್ಪೊರೇಟ್ ಪರವಾದ ಕೃಷಿ ಕಾಯ್ದೆಗಳು ರದ್ದಾಗಲಿ ಕೃಷಿ ಭೂಮಿ ರೈತರ ಕೈಯಲ್ಲಿ ಉಳಿಯಲಿ ಎಂಬ ಘೋಷಣೆಯೊಂದಿಗೆ ಸಮ್ಮೇಳನದಲ್ಲಿ ಸುಧೀರ್ಘ ಚರ್ಚೆ ನಡೆಯಲಿದೆ ಎಂದರು. ಅಮೇರಿಕ ದೊಂದಿಗೆ ಇತ್ತೀಚಿಗೆ ನಡೆದ ವ್ಯಾಪಾರ ಒಪ್ಪಂದ ಭಾರತ ಅಪಾಯಕ್ಕೆ ತಳ್ಳಲ್ಪಟ್ಟಿದೆ. ಸಂಸತ್ತಿನಲ್ಲಿ ಚರ್ಚಿಸದೆ ನಡೆದಿರುವ ಈ ಒಪ್ಪಂದ, ದೇಶದ ಸಾರ್ವಭೌಮತ್ವವನ್ನು ಬಲಿ



ಪಡೆದಿದೆ. ಡೊನಾಲ್ಡ್ ಟ್ರಂಪ್ ರು 50ರಷ್ಟಿದ್ದ ತೆರಿಗೆಯನ್ನು 18ಕ್ಕೆ ಇಳಿಸಿದ್ದೇ ದೊಡ್ಡ ಸುದ್ದಿಯಾಗುತ್ತಿದೆ. ನಮ್ಮ ಸರ್ಕಾರ ತೆರಿಗೆಯನ್ನು ಸೊನ್ನೆಗೆ ಇಳಿಸಿದ್ದು ಸುದ್ದಿಯಾಗುತ್ತಿಲ್ಲ. ಜೀರೋ ತೆರಿಗೆಯಿಂದ ಕೃಷಿ ಕ್ಷೇತ್ರವನ್ನು ಹೊರಗಿಡಲಾಗಿದೆ ಎಂದು ಸುಳ್ಳು ಹೇಳಲಾಗಿದೆ.ಈ ಒಪ್ಪಂದದಿಂದ ನಮ್ಮ ದೇಶದ ರೈತರ ಕೃಷಿಗೆ ದೊಡ್ಡ ಪೆಟ್ಟು ಬಿದ್ದಿದೆ.ಅಮೇರಿಕದ ಸರ್ಕಾರ ಅಲ್ಲಿನ ಕೃಷಿಗೆ ದೊಡ್ಡ ಮಟ್ಟದ ಸಬ್ಸಿಡಿ ಕೊಡುತ್ತಿದೆ. ಅಮೇರಿಕದ ಗೋಧಿ, ಹೈನುಗಾರಿಕೆ ಉತ್ಪನ್ನಗಳು ಸೇರಿದಂತೆ ಇತರೆ ಕೃಷಿ ಉತ್ಪನ್ನಗಳು ಭಾರತದ ಮಾರುಕಟ್ಟೆ ಪ್ರವೇಶಿಸಿದರೆ, ನಮ್ಮ ರೈತರ ಬದುಕು ಸರ್ವನಾಶಗುತ್ತದೆ. ಅಲ್ಲಿನ ಕೃಷಿಕ್ಷೇತ್ರ ರೈತರ ಕೈಯಲ್ಲಿಲ್ಲ. ಕಾರ್ಪೊರೇಟ್ ಕಂಪನಿಗಳ ಮಾಲಿಕತ್ವದಲ್ಲಿದೆ. ಸಾವಿರಾರು ಎಕರೆಯ ಫಾರ್ಮಿಂಗ್ ಕೃಷಿಗೆ, ವಿಮಾನ, ಹೆಲಿಕ್ಯಾಪ್ಟರ್ ಮೂಲಕ ಔಷಧ ಸಿಂಪಡಣೆ ಮಾಡುವ ಹಾಗೂ ಇತರೆ ಕಾರ್ಯಗಳು ಅತ್ಯಂತ ಆಧುನಿಕ ಯಂತ್ರಗಳಿಂದ ನಡೆಯುತ್ತವೆ. ಅಮೇರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ತನ್ನ ದೇಶದ ದೈತ್ಯ ಕಂಪನಿಗಳಿಗೆ ಲಾಭ ಮಾಡಲು ನಮ್ಮ ರೈತರನ್ನು ಬಲಿಪಡೆಯುತ್ತಿದ್ದಾನೆಂದರು.

ಸಮ್ಮೇಳನದಲ್ಲಿ ಅಮೇರಿಕಾದೊಂದಿನ ಭಾರತದ ವ್ಯಾಪಾರ ಒಪ್ಪಂದದ ಬಗ್ಗೆ ಸವಿಸ್ತಾರವಾದ ಚರ್ಚೆ ನಡೆಯಲಿದೆ ಎಂದರು.ಸಮ್ಮೇಳನದಲ್ಲಿ ಸಿಪಿಐ

ಮೂರನೇಯ ಪುಟಕ್ಕೆ

ಅನೈತಿಕ ಸಂಬಂಧ, ಹಳೆ ದ್ವೇಷದ ಹಿನ್ನೆಲೆ ವ್ಯಕ್ತಿಯ ಕೊಲೆ


ರಾಯಚೂರು,ಮಾ.16-

ನ್ಯಾಯ ಪಂಚಾಯಿತಿ ವೇಳೆ, ತಾಯಿ ಎದುರಲ್ಲಿ ಕೊಡಲಿಯಿಂದ ಹೊಡೆದು ಕೊಲೆ ಮಾಡಲಾಗಿದೆ .

ರಾಯಚೂರು ತಾಲೂಕಿನ ಬುಳ್ಳಾಪುರ ಗ್ರಾಮದಲ್ಲಿ ಘಟನೆ ನಡೆದಿದೆ. ಬಳ್ಳಾಪುರ ಗ್ರಾಮದ ಪ್ರಾಣೇಶ್ (23) ಕೊಲೆಯಾದ ವ್ಯಕ್ತಿಯಾಗಿದ್ದಾರೆ

ದಿನ್ನಿ ಗ್ರಾಮದ ಪ್ರಸಾದ್, ಮಲ್ಲೇಶ್, ಮಲ್ಲಿಕಾರ್ಜುನ್, ಅಮರೇಶ್ ಎಂಬುವವರಿಂದ ಕೊಲೆ ಮಾಡಿದ್ದಾರೆಎನ್ನಲಾಗಿದೆ. ಪ್ರಸಾದ್ ಹೆಂಡತಿ ಮತ್ತು ಪ್ರಾಣೇಶ್ ನಡುವೆ ಅನೈತಿಕಸಂಬಂಧ ಇತ್ತುಎನ್ನಲಾಗುತ್ತಿದೆ

ಕಳೆದ ಮೂರು ತಿಂಗಳಿನಿಂದ ಪ್ರಾಣೇಶ್ ಗಾಗಿ ಹುಡುಕಾಟ ನಡೆಸಿದ್ದ ಪ್ರಸಾದ್ ಅವರು ನಿನ್ನೆ ಬಳ್ಳಾಪುರ ಗ್ರಾಮದಲ್ಲಿ ಜಾಗದ



ವಿಷಯಕ್ಕೆ ನ್ಯಾಯ ಪಂಚಾಯಿತಿ ನಡೆಯುತ್ತಿತ್ತು. ಪ್ರಾಣೇಶ್ ಇರುವುದನ್ನು ಖಚಿತಪಡಿಸಿಕೊಂಡು ಹಿಂದಿನಿಂದ ಬಂದು ತಲೆಗೆ ಕೊಡಲಿಯಿಂದ ಹೊಡೆದ ಪ್ರಸಾದ್.ಗಂಭೀರ ಗಾಯಗೊಂಡ ಪ್ರಾಣೇಶ್ ಆಸ್ಪತ್ರೆಗೆ ಸಾಗಿಸಿದರು. ಚಿಕಿತ್ಸೆ ಫಲಕಾರಿಯಾಗದೆ ಸಾವನ್ನಪ್ಪಿದ್ದಾರೆ

ಕೊಲೆ ಮಾಡಿ ಪರಾರಿಯಾಗಿರುವ ಪ್ರಸಾದ್ ಸೇರಿ ನಾಲ್ಕು ಜನ ಆರೋಪಿಗಳು ಪರಾರಿಯಾಗಿದ್ದಾರೆ

ಇಡಪನೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಆರೋಪಿಗಳಿಗಾಗಿ ಶೋಧಕಾರ್ಯ ಪೊಲೀಸರು ಆರಂಭಿಸಿದ್ದಾರೆ.

ಲಿಂಗಸುಗೂರು ಗುತ್ತಿಗೆ ಕಾರ್ಮಿಕರನ್ನು ಖಾಯಂ ಗೊಳಿಸಲು ಆಗ್ರಹಿಸಿ ಎ.13ರಂದು ಬೃಹತ್ ಸಮಾವೇಶ

ಲಿಂಗಸುಗೂರು,ಮಾ.15-

ಗುತ್ತಿಗೆ ಕಾರ್ಮಿಕರನ್ನು ಖಾಯಂ ಗೊಳಿಸಲು ಆಗ್ರಹಿಸಿ ಎ.13 ರಂದು ರಾಯಚೂರಿನಲ್ಲಿ ಬೃಹತ್ ಕಾರ್ಮಿಕ ಸಮಾವೇಶವನ್ನು ಹಮ್ಮಿಕೊಳ್ಳಲಾಗಿದೆ ಎಂದು ಟಿ.ಯು.ಸಿ.ಐ ರಾಜ್ಯ ಪ್ರಧಾನ ಕಾರ್ಯದರ್ಶಿ ಆರ್.ಮಾನಸಯ್ಯ ತಿಳಿಸಿದರು.

ಲಿಂಗಸುಗೂರು ಪಟ್ಟಣದಲ್ಲಿ ಟ್ರೇಡ್ ಯೂನಿಯನ್ ಸೆಂಟರ್ ಆಫ್ ಇಂಡಿಯಾ ಜಿಲ್ಲಾ ಸಮಿತಿ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷವು ಕರ್ನಾಟಕದ ಕಾರ್ಮಿಕರಿಗೆ ಕೊಟ್ಟ ಮಾತನ್ನು ತಪ್ಪಿದೆ. ತನ್ನ ಚುನಾವಣಾ ಪ್ರಣಾಳಿಕೆಯಲ್ಲಿ ಕಾಂಗ್ರೆಸ್ ಪಕ್ಷವು ಅಧಿಕಾರಕ್ಕೆ ಬಂದರೆ ರಾಜ್ಯದ ಎಲ್ಲಾ ಗುತ್ತಿಗೆ ಕಾರ್ಮಿಕರನ್ನು ಖಾಯಂಗೊಳಿಸಲಾಗುವುದು ಎಂದು ಹೇಳಿತ್ತು. ಅಧಿಕಾರಕ್ಕೆ ಬಂದು ಎರಡುವರೆ ವರ್ಷವಾದರೂ ಸರ್ಕಾರದ ವಿವಿಧ ಇಲಾಖೆಯಲ್ಲಿರುವ ಗುತ್ತಿಗೆ ಕಾರ್ಮಿಕರನ್ನು ಖಾಯಂಗೊಳಿಸಲು ಮುಂದಾಗುತ್ತಿಲ್ಲ. ಕಳೆದ 10-20 ವರ್ಷಗಳಿಂದ ಖಾಯಂ ಸ್ವರೂಪದಲ್ಲಿ ಕೆಲಸ ಮಾಡುತ್ತಿರುವ ನೀರಾವರಿ, ಶಿಕ್ಷಣ, ಜಿಲ್ಲಾ ಪಂಚಾಯತ್ ರಾಜ್, ಗಣಿ, ಕಂದಾಯ, ಕೃಷಿ, ಸಾರಿಗೆ, ಮಹಿಳಾ ಮತ್ತು ಮಕ್ಕಳ, ಪೌರಾಸೇವೆ, ಆರೋಗ್ಯ, ವೈದ್ಯಕೀಯ ವಿಜ್ಞಾನ ಮುಂತಾದ ಇಲಾಖೆಯ ಕಾರ್ಮಿಕರನ್ನು



ಮೂರನೇಯ ಪುಟಕ್ಕೆ

ಕೆ. ಶಿವನಗೌಡ ನಾಯಕ್ ಮೇಲಿನ ಎಫ್ಐಆರ್ ರದ್ದುಪಡಿಸಲು ಅಜಿತ್ ಕುಮಾರ ಆಗ್ರಹ

ಸಿರವಾರ, ಮಾ.16-

ಮಾಜಿ ಸಚಿವರು ಹಾಗೂ ಮಾಜಿ ಶಾಸಕರಾದ ಕೆ. ಶಿವನಗೌಡ ನಾಯಕ್ ಅವರ ಮೇಲೆ ದಾಖಲಾದ ಎಫ್ಐರ್ಆ ಅನ್ನು ತಕ್ಷಣವೇ ರದ್ದುಪಡಿಸಬೇಕು ಎಂದು ಸಿರವಾರ ಪಟ್ಟಣ ಪಂಚಾಯತ್ ಸದಸ್ಯರಾದ ಅಜಿತ್ ಕುಮಾರ ಹೊನ್ನಟಗಿ ಆಗ್ರಹಿಸಿದ್ದಾರೆ.

ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳ ಒಳಮೀಸಲಾತಿ ವಿಷಯದಲ್ಲಿ ಆಗಿರುವ ಅನ್ಯಾಯದ ಕುರಿತು ಚಿತ್ರದುರ್ಗದಲ್ಲಿ ನಡೆದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಪೂರ್ವಭಾವಿ ಸಭೆಯಲ್ಲಿ ಕೆ. ಶಿವನಗೌಡ ನಾಯಕ್ ಅವರು



ತಮ್ಮ ಅಭಿಪ್ರಾಯವನ್ನು ವ್ಯಕ್ತಪಡಿಸಿದ್ದರು. ಆದರೆ ಅವರ ಹೇಳಿಕೆಯನ್ನು ತಪ್ಪಾಗಿ ಅರ್ಥೈಸಿಕೊಂಡು ಅವರ ವಿರುದ್ಧ ಎಫ್ಐಆರ್ ದಾಖಲಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಇದು ಅನ್ಯಾಯಕರ ಕ್ರಮವಾಗಿದ್ದು, ಅವರ ಹೇಳಿಕೆಯ ನಿಜವಾದ ಅರ್ಥವನ್ನು ಪರಿಗಣಿಸದೆ ಪ್ರಕರಣ ದಾಖಲಿಸಿರುವುದು ಸರಿಯಲ್ಲ. ಆದ್ದರಿಂದ ಸಂಬಂಧಪಟ್ಟ ಅಧಿಕಾರಿಗಳು ಈ ಪ್ರಕರಣವನ್ನು ಪರಿಶೀಲಿಸಿ, ಕೆ. ಶಿವನಗೌಡ ನಾಯಕ್ ಅವರ ಮೇಲಿನ ಎಫ್ಐರ್ಆ ಅನ್ನು ತಕ್ಷಣವೇ ರದ್ದುಪಡಿಸಬೇಕು ಎಂದು ಅವರು ಒತ್ತಾಯಿಸಿದ್ದಾರೆ.

ಒಂದು ವೇಳೆ ಎಫ್ಐರ್ಆ ಅನ್ನು ರದ್ದುಪಡಿಸದಿದ್ದರೆ, ಸಿರವಾರ ತಾಲೂಕಿನಲ್ಲಿ ಹೋರಾಟ ನಡೆಸಲಾಗುವುದು ಎಂದು ಅಜಿತ್ ಕುಮಾರ ಹೊನ್ನಟಗಿ ಎಚ್ಚರಿಕೆ ನೀಡಿದ್ದಾರೆ.

ರಾಷ್ಟ್ರೀಯ ಲೋಕ್ ಅದಾಲತ್‌ನಲ್ಲಿ ಒಟ್ಟು 2,42,425 ಪ್ರಕರಣಗಳು ಇತ್ಯರ್ಥ



ಕಲಬುರಗಿ,ಮಾ.16-

ಗೌರವಾನ್ವಿತ ಉಚ್ಚ ನ್ಯಾಯಾಲಯ ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಅಡಿಯಲ್ಲಿ ಕಲಬುರಗಿ ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ಶನಿವಾರ ಹಮ್ಮಿಕೊಳ್ಳಲಾದ ರಾಷ್ಟ್ರೀಯ ಲೋಕ್ ಅದಾಲತ್‌ನಲ್ಲಿ ಒಟ್ಟು 2,42,425 ಪ್ರಕರಣಗಳು ಇತ್ಯರ್ಥವಾಗಿದ್ದು, ಅವುಗಳಲ್ಲಿ 9,181 ಪೆಂಡಿಂಗ್ ಪ್ರಕರಣಗಳು ಹಾಗೂ 2,33,244 ವ್ಯಾಜ್ಯಪೂರ್ವ ಪ್ರಕರಣಗಳು ಇತ್ಯರ್ಥಗೊಂಡಿರುತ್ತವೆ ಎಂದು ಕಲಬುರಗಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಶ್ರೀನಿವಾಸ ನವಲೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅದೇ ರೀತಿ ಈ ಅದಾಲತ್‌ನಲ್ಲಿ ಜಿಲ್ಲೆಯಲ್ಲಿ 05 ಪ್ರಕರಣಗಳಲ್ಲಿ ಬೇರ್ಪಡೆಯಾಗಿದ್ದ ಪತಿ ಮತ್ತು ಪತ್ನಿಯರನ್ನು ಒಂದುಗೂಡಿಸಲಾಯಿತು. 10 ವರ್ಷಗಳಿಗಿಂತ ಹೆಚ್ಚಿನ ಅವಧಿಯ 01 ಪ್ರಕರಣ, 07ವರ್ಷಗಳಿಗಿಂತ ಹೆಚ್ಚಿನ ಅವಧಿಯ 07 ಪ್ರಕರಣಗಳನ್ನು ರಾಜಿ ಮಾಡಿಸಿ ಕಲಬುರಗಿ ಜಿಲ್ಲೆಯಲ್ಲಿ ಮೆಗಾ ಲೋಕ್ ಅದಾಲತ್ ಅದ್ಭುತ ಯಶಸ್ಸನ್ನು ಕಂಡಿರುತ್ತದೆ.

ಕಲಬುರಗಿ ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಜಿ.ಎಲ್. ಲಕ್ಷ್ಮೀನಾರಾಯಣ ಸೇರಿದಂತೆ ಜಿಲ್ಲೆಯ ಎಲ್ಲಾ ಗೌರವಾನ್ವಿತ ನ್ಯಾಯಾಧೀಶರು, ನ್ಯಾಯವಾದಿಗಳು, ಸಾರ್ವಜನಿಕರು ಹಾಗೂ ಕಕ್ಷಿದಾರರ ಸಹಕಾರದಿಂದ ನ್ಯಾಶನಲ್ ಲೋಕ್‌ಅದಾಲತ್ ಮೂಲಕ ಸಿವಿಲ್ ದಾವೆಗಳು, ಮೋಟಾರು ವಾಹನ ಅಪಘಾತ ಪರಿಹಾರ ಪ್ರಕರಣಗಳು, ರಾಜಿಯಾಗಬಹುದಾದ ಕ್ರಿಮಿನಲ್ ಪ್ರಕರಣಗಳು, ಚೆಕ್ ಪ್ರಕರಣಗಳು, ಭೂಸ್ವಾಧೀನ ಪರಿಹಾರ ವಸೂಲಾತಿ ಪ್ರಕರಣಗಳು, ಬ್ಯಾಂಕ್‌ಗಳಿಗೆ ಸಂಬಂಧಿಸಿದ ವ್ಯಾಜ್ಯಪೂರ್ವ ಪ್ರಕರಣಗಳನ್ನು ಇತ್ಯರ್ಥಗೊಳಿಸಲಾಗಿದೆ.

ಈ ಲೋಕ ಅದಾಲತ್‌ನಲ್ಲಿ ಕಕ್ಷಿದಾರರು, ನ್ಯಾಯಾಧೀಶರು, ಸಂಧಾನಕಾರರು ಹಾಗೂ ಸಂಬಂಧಪಟ್ಟ ನ್ಯಾಯವಾದಿಗಳು ರಾಜೀ ಸಂಧಾನ ಪ್ರಕ್ರಿಯೆಯಲ್ಲಿ ಪಾಲ್ಗೊಂಡಿದ್ದರು. ಶನಿವಾರ ರಾಜ್ಯದ ಎಲ್ಲಾ ನ್ಯಾಯಾಲಯಗಳಲ್ಲಿ ರಾಷ್ಟ್ರೀಯ ಲೋಕ ಅದಾಲತ್‌ನ್ನು ಹಮ್ಮಿಕೊಳ್ಳಲಾಯಿತು.



ಸಿರುಗುಪ್ಪದಲ್ಲಿ ಎಚ್‌ಪಿವಿ ಲಸಿಕಾ ಅಭಿಯಾನ 14 ವರ್ಷದ ಬಾಲಕಿಯರಿಗೆ ಗಾರ್ಡಿಸಿಲ್4 ಲಸಿಕೆ

ಸಿರುಗುಪ್ಪ,ಮಾ.16-

ನಗರದ ಸಾರ್ವಜನಿಕ ಆಸ್ಪತ್ರೆಯಲ್ಲಿ ಎಚ್‌ಪಿವಿ ಲಸಿಕಾ ಅಭಿಯಾನ ಕಾರ್ಯಕ್ರಮವನ್ನು ಮುಖ್ಯ ವೈದ್ಯಾಧಿಕಾರಿ ಹಾಗೂ ತಾಲೂಕು ಆರೋಗ್ಯ ಅಧಿಕಾರಿಗಳ ಕಚೇರಿ ಸಹಯೋಗದಲ್ಲಿ ಆಯೋಜಿಸಲಾಯಿತು. ಈ ವೇಳೆ 14 ವರ್ಷದ ಹೆಣ್ಣು ಮಕ್ಕಳಿಗೆ ಗಾರ್ಡಿಸಿಲ್ 4 ಲಸಿಕೆಯನ್ನು ವಿತರಿಸಲಾಯಿತು.


ಕಾರ್ಯಕ್ರಮದಲ್ಲಿ ಮಾತನಾಡಿದ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಮುಹಮ್ಮದ್ ಖಾಸಿಂ, ಮಹಿಳೆಯರಲ್ಲಿ ಕಾಣಿಸಿಕೊಳ್ಳುವ ಗರ್ಭಕಂಠ ಕ್ಯಾನ್ಸರ್‌ನ್ನು ತಡೆಗಟ್ಟಲು ಎಚ್‌ಪಿವಿ ಲಸಿಕೆ ಸುರಕ್ಷಿತ ಮತ್ತು ಪರಿಣಾಮಕಾರಿ ಎಂದು ತಿಳಿಸಿದರು. ಮುಂದಿನ ದಿನಗಳಲ್ಲಿ ಗರ್ಭಕಂಠ ಕ್ಯಾನ್ಸರ್‌ನಿಂದ ರಕ್ಷಿಸಿಕೊಳ್ಳಲು ಬಾಲಕಿಯರು ಈ ಲಸಿಕೆಯನ್ನು ಪಡೆಯುವುದು ಅಗತ್ಯ ಎಂದು ಅವರು ವಿವರಿಸಿದರು.

ಮುಖ್ಯ ವೈದ್ಯಾಧಿಕಾರಿ ವಿವೇಕಾನಂದ ಮಾತನಾಡಿ, ಎಚ್‌ಪಿವಿ ಲಸಿಕೆಯಿಂದ ಯಾವುದೇ ತೊಂದರೆ ಇಲ್ಲ. ಎಲ್ಲರೂ ಧೈರ್ಯವಾಗಿ ಲಸಿಕೆಯ ಸದುಪಯೋಗ ಪಡೆದುಕೊಳ್ಳಬೇಕು ಎಂದು ಕೋರಿದರು.

ಲಸಿಕೆ ಪಡೆಯಲು ಎಸ್.ಪಿ. ನೇಹರೆಡ್ಡಿ (ತಂದೆ ಎಸ್.ಪಿ. ನಂದೀಶ್ವರ ರೆಡ್ಡಿ) ಸ್ವಯಂ ಪ್ರೇರಿತವಾಗಿ ಮುಂದಾಗಿ ಲಸಿಕೆ ಪಡೆದುಕೊಂಡರು.

ಈ ಸಂದರ್ಭದಲ್ಲಿ ಕ್ಷೇತ್ರ ಕಾರ್ಯಕ್ರಮ ವ್ಯವಸ್ಥಾಪಕ ಪ್ರಹಲ್ಲಾದ್, ನಿರೀಕ್ಷಣಾಧಿಕಾರಿ ಭೀಮರಾಜ್ ರೆಡ್ಡಿ, ಕ್ಷೇತ್ರ ರೋಗಶಾಸ್ತ್ರಜ್ಞ ನವೀನ್, ಆಪ್ತ ಸಮಾಲೋಚಕಿ ಸಿದ್ದಮ್ಮ, ಪ್ರಾಥಮಿಕ ಆರೋಗ್ಯ ಸುರಕ್ಷತಾ ಅಧಿಕಾರಿ ಕೃಷ್ಣವೇಣಿ ನರೇಶ್, ಇಂಡಿಯನ್ ರೆಡ್ ಕ್ರಾಸ್ ಸೊಸೈಟಿ ಸದಸ್ಯರು, ಸಾಕ್ಷರತಾ ಕಾರ್ಯಕರ್ತ ಅಬ್ದುಲ್ ನಬಿ ಹಾಗೂ ಫಲಾನುಭವಿಗಳ ಪಾಲಕ ಪೋಷಕರು ಉಪಸ್ಥಿತರಿದ್ದರು.

ಹಳೆಯ ಗೆಳೆಯರ ಸಮ್ಮಿಲನ : ಸಾಧಕರಿಗೆ ಅಭಿನಂದನೆ



ಕಲಬುರಗಿ,ಮಾ.16-

ಆಧುನಿಕ ಜೀವನದ ಧಾವಂತದಲ್ಲಿ ಮಾನವ ಸಂಬಂಧಗಳು ಕ್ಷೀಣಿಸುತ್ತಿರುವ ಸಂದರ್ಭದಲ್ಲಿ ಇಪ್ಪತ್ತಕ್ಕೂ ಹೆಚ್ಚು ವರ್ಷಗಳ ಹಿಂದಿನ ಸ್ನೇಹವನ್ನು ಉಳಿಸಿಕೊಂಡು ಗೆಳೆಯರ ಸಾಧನೆಗಳನ್ನು ಗುರುತಿಸಿ ಅವರಿಗೆ ಅಭಿನಂದನೆ ಸಲ್ಲಿಸುವುದು ಅಪರೂಪದ ಸಂಗತಿಯಾಗಿದೆ ಎಂದು ಪತ್ರಾಗಾರ ಇಲಾಖೆ ನಿರ್ದೇಶಕ ಡಾ. ವೀರಶೆಟ್ಟಿ ಗಾರಂಪಳ್ಳಿ ಹೇಳಿದರು.

ನಗರದ ನೂತನ ವಿದ್ಯಾಲಯದ ಸಭಾಭವನದಲ್ಲಿ ಹಳೆ ವಿದ್ಯಾರ್ಥಿ ಗೆಳೆಯರ ಬಳಗದ ವತಿಯಿಂದ ಆಯೋಜಿಸಿದ್ದ ಅಭಿನಂದನಾ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿ, ಸಾಧಕರಿಗೆ ಸ್ನೇಹಿತರು ಹಮ್ಮಿಕೊಂಡ ಅಭಿನಂದನಾ ಸಮಾರಂಭವು ಇಂದಿನ ಸಮಾಜದಲ್ಲಿ ಸ್ನೇಹ ಮತ್ತು ಸಂಬಂಧಗಳಿಗೆ ಹೊಸ ಅರ್ಥ ನೀಡಿದೆ ಎಂದು ಅವರು ತಿಳಿಸಿದರು. ಕಾರ್ಯಕ್ರಮದ ಅಧ್ಯಕ್ಷತೆ ಯನ್ನು ನೂತನ ವಿದ್ಯಾಲಯದ ಪ್ರಾಂಶುಪಾಲ ಡಾ.ದಯಾನಂದ ಶಾಸ್ತ್ರಿ ವಹಿಸಿದ್ದರು. ಸುಭಾಷ್ ಚಂದ್ರ ಪಾಟೀಲ್ ಸ್ಮಾರಕ ಜನಕಲ್ಯಾಣ ಟ್ರಸ್ಟ್ ಪಾಳಾ ಕಲಬುರಗಿ ಹಾಗೂ ನೂತನ ವಿದ್ಯಾಲಯದ ನಿರ್ದೇಶಕರಾದ ಡಾ.ಗೋವಿಂದ್ ರಾಜ್ ಪೂಜಾರ್ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು.

ಈ ಸಂದರ್ಭದಲ್ಲಿ ಕಲ್ಯಾಣ ಕರ್ನಾಟಕ ಗ್ರಂಥಪಾಲಕರ ಸಂಘದ ಅಧ್ಯಕ್ಷರಾಗಿ ಆಯ್ಕೆಯಾದ ಡಾ.ಪರಮಾನಂದ ಹಂಗರಗಿ ಹಾಗೂ ಜಿಲ್ಲಾಮಟ್ಟದ ಜ್ಯೋತಿಬಾ ಫುಲೆ ಪ್ರಶಸ್ತಿ ಪುರಸ್ಕೃತರಾದ ಶ್ರೀನಿವಾಸ ಡಿ.ಜಾಧವ, ಜ್ಞಾನ ಜ್ಯೋತಿ ಮತ್ತು ಕಲ್ಯಾಣ ಕರ್ನಾಟಕ ಪ್ರಾಂತ್ಯದ ಶ್ರೇಷ್ಠ ವಿದ್ಯಾಲಯ ಪ್ರಶಸ್ತಿ ಪಡೆದ ಎ.ಕೆ.ಆರ್. ದೇವಿ ಕಾಲೇಜಿನ ಪ್ರಾಂಶುಪಾಲ ವಿದ್ಯಾಸಾಗರ್ ದೇಶಮುಖ ಅವರನ್ನು ಗೌರವಿಸಿ ಸನ್ಮಾನಿಸಿ ಅಭಿನಂದಿಸಲಾಯಿತು.

ಕಾರ್ಯಕ್ರಮದಲ್ಲಿ ನೀಷಾದ ಮತ್ತು ನಿನಾದ ಮುಡಬಿ ಸಂಗಡಿಗರಿಂದ ಸಂಗೀತ ಕಾರ್ಯಕ್ರಮ ನಡೆಯಿತು. ಡಾ.ಎನ್.ಎಸ್. ಕುಲಕರ್ಣಿ ಸ್ವಾಗತಿಸಿದರು, ಶಿಕ್ಷಕ ಶಂಕರ ಬಿರಾದಾರ ಹಾಗೂ ಬಸವರಾಜ ಭಾಗಾ ಕಾರ್ಯಕ್ರಮ ನಿರೂಪಣೆ ನಡೆಸಿದರು. ದಾನಪ್ಪ ವಗ್ಗಿ ವಂದಿಸಿದರು.

ಡಾ. ಲಿಂಗಾಬಸವ ಪಾಟೀಲ, ಗುಂಡೂರಾವ. ಹುಮನಾಬಾದ, ಶಿವಕುಮಾರ ಪಾಟೀಲ, ಎಂ ಬಿ ರಾಜ್ , ನಾಗೇಂದ್ರ ಪೂಜಾರಿ, ಸೂರ್ಯಕಾಂತ ಉಮಾಪುರೆ, ಜಿತೇಂದ್ರ ಬೆಳಗುಂದಿ, ಮಹೇಂದ್ರ ಅಯ್ಯಳ್‌ಕರ್, ರಾಜೇಶ್ ರಾಸೂರ್, ಸಂಜೀವಕುಮಾರ ಜೋಗ, ಶರಣು ಜೇವರ್ಗಿ ಉಪಸ್ಥಿತರಿದ್ದರು.

ಬಳ್ಳಾರಿ: ರಾಷ್ಟ್ರೀಯ ಲೋಕ್ ಅದಾಲತ್‌ನಲ್ಲಿ ವಿವಿಧ ಬಗೆಯ ಪ್ರಕರಣಗಳು ರಾಜಿ ಸಂಧಾನ

11,406 ಪ್ರಕರಣ ಇತ್ಯರ್ಥ, 37.86 ಕೋಟಿ ರೂ. ವಸೂಲಾದ ಪರಿಹಾರ ಮೊತ್ತ

ಬಳ್ಳಾರಿ,ಮಾ.16

ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆ ಒಳಗೊಂಡು ಒಟ್ಟು 32 ನ್ಯಾಯಾಲಯಗಳಲ್ಲಿ ಶನಿವಾರ ರಾಷ್ಟ್ರೀಯ ಲೋಕ್ ಅದಾಲತ್ ಸುಸೂತ್ರವಾಗಿ ನಡೆದು, ವಿವಿಧ ವ್ಯಾಜ್ಯಗಳ ಪ್ರಕರಣಗಳು ವಿಲೇವಾರಿಯಾದವು.

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಕೆ.ಜಿ.ಶಾಂತಿ ಅವರು ಖುದ್ದಾಗಿ ಪ್ರಕರಣಗಳ ವಿಲೇವಾರಿ ಮಾಡುವಲ್ಲಿ ಸಕ್ರಿಯವಾಗಿ ಪಾಲ್ಗೊಂಡು, ನಗರದ ತಾಳೂರು ರಸ್ತೆಯ ಜಿಲ್ಲಾ ನ್ಯಾಯಾಲಯದ ಸಂಕೀರ್ಣದಲ್ಲಿರುವ ಎಲ್ಲಾ ನ್ಯಾಯಾಲಯಗಳಲ್ಲಿ ನಡೆದ ಲೋಕ್-ಅದಾಲತ್‌ಗಳನ್ನು ವೀಕ್ಷಿಸಿದರು.

ಈ ವೇಳೆ ಮಾತನಾಡಿದ ಅವರು, ಸಾರ್ವಜನಿಕರು-ಕಕ್ಷಿದಾರರು ತಮ್ಮ ವ್ಯಾಜ್ಯಗಳನ್ನು ಪರಸ್ಪರ ರಾಜಿ ಸಂಧಾನದ ಮೂಲಕ ಇತ್ಯರ್ಥಗೊಳಿಸಿಕೊಳ್ಳುವುದು ಉತ್ತಮ ಜೀವನ ನಡೆಸಲು ಒಂದು ಸದಾವಕಾಶವಾಗಿದೆ. ತ್ವರಿತ ನ್ಯಾಯಕ್ಕಾಗಿ ಕಕ್ಷಿದಾರರು ಮುತುವರ್ಜಿ ವಹಿಸಿಕೊಂಡು, ''ರಾಷ್ಟ್ರೀಯ ಲೋಕ್ ಅದಾಲತ್''ನಲ್ಲಿ ಭಾಗವಹಿಸಿದರೆ ಬಾಕಿ ಇರುವ ಪ್ರಕರಣಗಳನ್ನು ರಾಜಿ ಸಂಧಾನದ ಮೂಲಕ



ಬಗೆ ಹರಿಸಿಕೊಂಡು ಸಾಮರಸ್ಯ ಜೀವನ ನಡೆಸಬಹುದು ಎಂದರು.

ವ್ಯಾಜ್ಯಪೂರ್ವ ಪ್ರಕರಣಗಳನ್ನು ರಾಜಿಗೆ ತೆಗೆದುಕೊಂಡಿದ್ದು, ಸಾರ್ವಜನಿಕರಿಂದ ಉತ್ತಮ ಪ್ರತಿಕ್ರಿಯೆ ದೊರೆತಿದೆ. ನ್ಯಾಯಾಲಯದ ನ್ಯಾಯಾಧೀಶರು, ವಕೀಲರು, ಸಿಬ್ಬಂದಿ ಸೇರಿದಂತೆ ವಿವಿಧ ಇಲಾಖೆಯ ಸಹಕಾರದೊಂದಿಗೆ ಮುಂದಿನ ದಿನಮಾನಗಳಲ್ಲಿ ವ್ಯಾಜ್ಯಪೂರ್ವ ಪ್ರಕರಣಗಳನ್ನು ರಾಜಿ ಸಂಧಾನದ ಮೂಲಕ ಬಗೆಹರಿಸಲು ಕಾರ್ಯಪ್ರವೃತ್ತರಾಗುತ್ತಾರೆ ಎಂದರು.

ಲೋಕ್ ಅದಾಲತ್‌ನ ಅಂಕಿಅಂಶ:★ ಇತ್ಯರ್ಥಗೊಂಡ ಬಾಕಿ ಪ್ರಕರಣಗಳ ಒಟ್ಟು ಸಂಖ್ಯೆ: 11,406 ಪ್ರಕರಣಗಳು. ವಸೂಲಾದ ಪರಿಹಾರ ಮೊತ್ತ: ರೂ.37,86,70,940. ಇತ್ಯರ್ಥಗೊಂಡ ವ್ಯಾಜ್ಯ ಪೂರ್ವ ಪ್ರಕರಣಗಳು: 6,47,139. ವಸೂಲಾದ ಪರಿಹಾರ ಮೊತ್ತ: ರೂ.127,58,84,012.

ಇತ್ಯರ್ಥಗೊಳಿಸಿದ ಪ್ರಕರಣಗಳು: ನ್ಯಾಯಾಲಯದಲ್ಲಿ ದೀರ್ಘಕಾಲದಿಂದ ಬಾಕಿ ಇದ್ದ 17,590 ಪ್ರಕರಣಗಳನ್ನು ರಾಜಿ ಸಂಧಾನಕ್ಕೆ ಗುರುತಿಸಲಾಗಿತ್ತು. ಇವುಗಳಲ್ಲಿ 11,406 ಪ್ರಕರಣಗಳನ್ನು ಯಶಸ್ವಿಯಾಗಿ ಇತ್ಯರ್ಥಪಡಿಸಲಾಗಿದೆ.

ರಾಷ್ಟ್ರೀಯ ಲೋಕ್ ಅದಾಲತ್ ಗೆ ಸಂಬಂಧಿಸಿದಂತೆ ಶನಿವಾರ ಬಳ್ಳಾರಿ ಜಿಲ್ಲೆಯಲ್ಲಿ ಒಟ್ಟು 27 ನ್ಯಾಯಪೀಠಗಳನ್ನು (ಬೆಂಚ್) ಸ್ಥಾಪಿಸಲಾಗಿತ್ತು.

ವಿವಾದಗಳ ಪರಿಹಾರಕ್ಕೆ ಮತ್ತು ಸಮುದಾಯದಲ್ಲಿ ಪರಸ್ಪರ ವಿಶ್ವಾಸವನ್ನು ಹೆಚ್ಚಿಸಲು ಲೋಕ್ ಅದಾಲತ್‌ಗಳು ಪರಿಣಾಮಕಾರಿ ಸಾಧನಗಳಾಗಿವೆ.

ಎಲ್ಲಾ ಪಾಲುದಾರರ ಸಹಕಾರ:


ಈ ಅದಾಲತ್‌ನ ಯಶಸ್ಸಿಗೆ ನ್ಯಾಯಾಧೀಶರು, ವಕೀಲರು, ಪೊಲೀಸ್ ಅಧಿಕಾರಿಗಳು, ಬ್ಯಾಂಕ್ ಅಧಿಕಾರಿಗಳು, ವಿವಿಧ ಇಲಾಖೆ ಅಧಿಕಾರಿಗಳು ಮತ್ತು ವಿಮಾ ಕಂಪನಿಗಳು ಸೇರಿದಂತೆ ಎಲ್ಲ ಪಾಲುದಾರರ ಸಹಕಾರ ಕಾರಣವಾಗಿದೆ ಎಂದು ತಿಳಿಸಿದರು.

ಲೋಕ್ ಅದಾಲತ್‌ಗಳು ವಿವಾದಗಳನ್ನು ತ್ವರಿತವಾಗಿ ಮತ್ತು ಪರಿಣಾಮಕಾರಿಯಾಗಿ ಇತ್ಯರ್ಥಪಡಿಸುವಲ್ಲಿ ಎಷ್ಟು ಯಶಸ್ವಿಯಾಗಿವೆ ಎಂಬುದನ್ನು ತೋರಿಸುತ್ತವೆ. ಇದು ನ್ಯಾಯಾಂಗದ ಮೇಲಿನ ಒತ್ತಡವನ್ನು ಕಡಿಮೆ ಮಾಡಲು ಮತ್ತು ಸಮಾಜದಲ್ಲಿ ಸೌಹಾರ್ದಯುತ ವಾತಾವರಣವನ್ನು ನಿರ್ಮಿಸಲು ಸಹಾಯ ಮಾಡುತ್ತದೆ. ಈ ರಾಷ್ಟ್ರೀಯ ಲೋಕ್ ಅದಾಲತ್ ಯಶಸ್ವಿಯಾಗಲು ಕಾರಣರಾದ ಎಲ್ಲರಿಗೂ ಅಭಿನಂದನೆ ತಿಳಿಸಿದರು.

ಇದೇ ವೇಳೆ ವಿವಿಧ ಕಲಹಗಳನ್ನು ರಾಜಿ ಸಂಧಾನದ ಮೂಲಕ ಬಗೆಹರಿಸಿಕೊಂಡ ಕುಟುಂಬಗಳನ್ನು ಮಾತನಾಡಿಸಿ ಅಭಿನಂದಿಸಿರು.

ಈ ಸಂದರ್ಭದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗು ಹಿರಿಯ ಸಿವಿಲ್ ನ್ಯಾಯಾಧೀಶರೂ ಆದ ರಾಜೇಶ್.ಎನ್ ಹೊಸಮನೆ ಸೇರಿದಂತೆ ವಿವಿಧ ನ್ಯಾಯಾಲಯಗಳ ನ್ಯಾಯಾಧೀಶರು, ಅಧಿಕಾರಿಗಳು ಇದ್ದರು.

ಕೋಡ್ಲಾ ಗ್ರಾಮಕ್ಕೆ 'ನಾಡ' ಕಳೆ: 18 ಲಕ್ಷದ ಹೊಸ ಕಛೇರಿ ಸಚಿವ ಡಾ.ಶರಣ್ ಪ್ರಕಾಶ್ ಪಾಟೀಲ್‌ರಿಂದ ಲೋಕಾರ್ಪಣೆ



ಕೋಡ್ಲಾ,ಮಾ.16-

ಸೇಡಂ ತಾಲೂಕಿನ ಪ್ರಮುಖ ಕೇಂದ್ರವಾಗಿ ಬೆಳೆಯುತ್ತಿರುವ ಕೋಡ್ಲಾ ಗ್ರಾಮಕ್ಕೆ ಈಗ ಆಡಳಿತಾತ್ಮಕವಾಗಿ ಹೊಸ ಶಕ್ತಿ ಬಂದಿದೆ. ಸುಮಾರು 18 ಲಕ್ಷ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾದ ಅತ್ಯಾಧುನಿಕ ಸೌಲಭ್ಯವುಳ್ಳ ಉಪ ತಹಸೀಲ್ದಾರ್ ಕಾರ್ಯಾಲಯ (ನಾಡ ಕಛೇರಿ) ವನ್ನು ವೈದ್ಯಕೀಯ ಶಿಕ್ಷಣ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಶರಣ್ ಪ್ರಕಾಶ್ ಪಾಟೀಲ್ ಅವರು ಅದ್ದೂರಿಯಾಗಿ ಉದ್ಘಾಟಿಸಿದರು.

ಅಭಿವೃದ್ಧಿಯ ಪಥದಲ್ಲಿ ಕೋಡ್ಲಾ ಉದ್ಘಾಟನೆ ನೆರವೇರಿಸಿ ಮಾತನಾಡಿದ ಸಚಿವರು, ಕೋಡ್ಲಾ ಗ್ರಾಮವನ್ನು ಮಾದರಿ ಗ್ರಾಮವನ್ನಾಗಿ ಮಾಡುವ ನಿಟ್ಟಿನಲ್ಲಿ ಸರ್ಕಾರ ಬದ್ಧವಾಗಿದೆ ಎಂದರು. ಗ್ರಾಮದಲ್ಲಿ ಈಗಾಗಲೇ ನಡೆದಿರುವ ಪ್ರಮುಖ ಕಾಮಗಾರಿಗಳ ಬಗ್ಗೆ ಮಾಹಿತಿ ನೀಡಿದರು: ಮೂಲಸೌಕರ್ಯ: ರಸ್ತೆ ಸುಧಾರಣೆ ಹಾಗೂ ವೈಜ್ಞಾನಿಕ ಚರಂಡಿ ವ್ಯವಸ್ಥೆ. ಸಾಮಾಜಿಕ ಸೌಲಭ್ಯ: ವಿವಿಧ ಸಮುದಾಯ ಭವನಗಳ ನಿರ್ಮಾಣ.

ರೈತ ಸ್ನೇಹಿ: ಕೃಷಿ ಚಟುವಟಿಕೆಗಳಿಗೆ ಪೂರಕವಾಗಿ 'ರೈತ ಸಂಪರ್ಕ ಕೇಂದ್ರ'ದ ಆಧುನೀಕರಣ. ಜೀವಜಲ: ಕುಡಿಯುವ ನೀರಿನ ಸಮರ್ಪಕ ಪೂರೈಕೆಗೆ ಆದ್ಯತೆ.

ಕೋಡ್ಲಾ ಜನತೆಯ ಬಹುದಿನದ ಬೇಡಿಕೆಯಾಗಿದ್ದ ನಾಡ ಕಛೇರಿ ಈಗ ಕಾರ್ಯಾರಂಭ ಮಾಡಿದೆ. ಅಧಿಕಾರಿಗಳು ಈ ಕಛೇರಿಯ ಮೂಲಕ ಜನಸಾಮಾನ್ಯರಿಗೆ ವಿಳಂಬವಿಲ್ಲದೆ ಸೇವೆ ನೀಡಬೇಕು. ಸರ್ಕಾರದ ಸೌಲಭ್ಯಗಳು ಕಟ್ಟಕಡೆಯ ವ್ಯಕ್ತಿಗೂ ತಲುಪುವಂತೆ ನಿಗಾ ವಹಿಸಿ. ಡಾ. ಶರಣ್ ಪ್ರಕಾಶ್ ಪಾಟೀಲ್, ಸಚಿವರು. ಈ ಐತಿಹಾಸಿಕ ಕ್ಷಣಕ್ಕೆ ಸಾಕ್ಷಿಯಾದ ಕಾರ್ಯಕ್ರಮದಲ್ಲಿ ಸೇಡಂ ತಹಸೀಲ್ದಾರರು, ಗ್ರಾಮದ ಹಿರಿಯ ಮುಖಂಡರು, ಜನಪ್ರತಿನಿಧಿಗಳು ಹಾಗೂ ನೂರಾರು ಗ್ರಾಮಸ್ಥರು ಉಪಸ್ಥಿತರಿದ್ದರು. ನಾಡ ಕಛೇರಿಯ ಆರಂಭದಿಂದಾಗಿ ಇನ್ಮುಂದೆ ಗ್ರಾಮಸ್ಥರು ಸಣ್ಣಪುಟ್ಟ ಕೆಲಸಗಳಿಗೂ ತಾಲೂಕು ಕೇಂದ್ರಕ್ಕೆ ಅಲೆಯುವ ಸಂಕಷ್ಟ ತಪ್ಪಿದಂತಾಗಿದೆ.

ಗುಲಬರ್ಗಾ ವಿವಿಯಲ್ಲಿ ಪಿ.ಎಂ-ಉಷಾ ಕೌಶಲ್ಯ ಅಭಿವೃದ್ಧಿ ಕೇಂದ್ರಕ್ಕೆ ಸಚಿವ ಪ್ರಿಯಾಂಕ್ ಖರ್ಗೆ ಅಡಿಗಲ್ಲು

ಕಲಬುರಗಿ,ಮಾ.16

ಗುಲಬರ್ಗಾ ವಿಶ್ವವಿದ್ಯಾಲಯದ ಆವರಣದಲ್ಲಿ ಪ್ರಧಾನಮಂತ್ರಿ ಉಚ್ಚತ್ತರ್ ಶಿಕ್ಷಾ ಅಭಿಯಾನ (ಕಋಖಖಏಅ) ಯೋಜನೆಯಡಿ ಸುಮಾರು 7 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಾತ್ತಿರುವ ಕೌಶಲ್ಯ ಅಭಿವೃದ್ಧಿ ಕೇಂದ್ರ ಹಾಗೂ ಸಂಯೋಜಿತ ಉಪನ್ಯಾಸ ಮಂದಿರ ಕಟ್ಟಡಗಳ ನಿರ್ಮಾಣಕ್ಕೆ ಶನಿವಾರ ರಾಜದಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಐ.ಟಿ.-ಬಿ.ಟಿ ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರು ಅಡಿಗಲ್ಲು ನೆರವೇರಿಸಿದರು.



ವಿದ್ಯಾರ್ಥಿಗಳಲ್ಲಿ ಕೌಶಲ್ಯಾಭಿವೃದ್ಧಿ, ತರಬೇತಿ, ಕಾರ್ಯಾಗಾರಗಳು, ಸಮ್ಮೇಳನಗಳು ಹಾಗೂ ಆಧುನಿಕ ಅಧ್ಯಯನಕ್ಕೆ ಅಗತ್ಯವಾದ ಸೌಲಭ್ಯಗಳನ್ನು ಒದಗಿಸುವ ಉದ್ದೇಶ ಈ ಕಟ್ಟಡ ಹೊಂದಿದೆ. ಸ್ನಾತಕ ಮತ್ತು ಸ್ನಾತಕೋತ್ತರ ಹಾಗೂ ಸಂಶೋಧನಾ ವಿದ್ಯಾರ್ಥಿಗಳಲ್ಲಿ ಕೌಶಲ್ಯ ಅಭಿವೃದ್ಧಿ ಕಲಿಕೆಗೆ ಉಪಯುಕ್ತವಾಗಲಿದೆ. ಕಟ್ಟಡವು ಜಿ+2 ವಿನ್ಯಾಸ ಹೊಂದಿದ್ದು, ಆಧುನಿಕ ತಾಂತ್ರಿಕತೆಯಿಂದ ಒಳಗೊಂಡ ಸುಸಜ್ಜಿತ ಕೊಠಡಿಗಳು, ಪೀಠೋಪಕರಣಗಳು, ಉಪನ್ಯಾಸ ಭವನಗಳು ಹಾಗೂ ಸಹಾಯಕ ಸೌಲಭ್ಯಗಳನ್ನು ಒಳಗೊಂಡಿದೆ. ಇದೇ ಸಂದರ್ಭದಲ್ಲಿ ಸಚಿವರು ವಿವಿಯ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿ ಅವರ ಕುಂದುಕೊರತೆಗಳನ್ನು ಆಲಿಸಿದರು. ವಿ.ವಿ.ಯ ಗ್ರಂಥಾಲಯದಲ್ಲಿ ಕೆ.ಎ.ಎಸ್., ಐ.ಎ.ಎಸ್ ಸ್ಪರ್ಧಾತ್ಮಕ ಪುಸ್ತಕ ದೊರೆಯುವಂತಾಗಬೇಕು, ವಿ.ವಿ.ಕ್ಯಾಂಪಸ್ ನಲ್ಲಿ ಮೂಲಸೌಕರ್ಯ ಅಭಿವೃದ್ಧಿಪಡಿಸಬೇಕು, ಹಾಸ್ಟೆಲ್ ಸಮಸ್ಯೆ ಬಗೆಹರಿಸಬೇಕು ಎಂದು ವಿದ್ಯಾರ್ಥಿಗಳು ಸಚಿವರಲ್ಲಿ ಮನವಿ ಮಾಡಿದರು. ಅತಿಥಿ ಉಪನ್ಯಾಸಕರು ಸಹ ತಮ್ಮ ಸಮಸ್ಯೆಗಳ ಕುರಿತು ಸಚಿವರಿಗೆ ಮನವರಿಕೆ ಮಾಡಿಕೊಟ್ಟರು. ಕುಂದುಕೊರತೆ ಆಲಿಸಿದ ಮಾತನಾಡಿದ ಸಚಿವರು, ಶೀಘ್ರವೆ ವಿ.ವಿ.ಗೆ ಭೇಟಿ ನೀಡಿ ಅರ್ಧ ದಿನ ನಿಮ್ಮೊಂದಿಗಿದ್ದು ನಿಮ್ಮ ಸಮಸ್ಯೆಗಳನ್ನು ಆಲಿಸಲಾಗುವುದು ಎಂದು ವಿದ್ಯಾರ್ಥಿಗಳಿಗೆ ಭರವಸೆ ನೀಡಿದ ಅವರು, ಕೆ.ಕೆ.ಆರ್.ಡಿ.ಬಿ. ಅನುದಾನದಲ್ಲಿ ಕ್ಯಾಂಪಸ್ ನಲ್ಲಿ ಮೂಲಸೌಕರ್ಯ ಕಾಮಗಾರಿಗಳು ಕೈಗೊಳ್ಳಲಾಗುವುದು ಎಂದರು.

ವಿದ್ಯಾರ್ಥಿಗಳಿಗೆ ಕೇವಲ ಪದವಿ ಮುಖ್ಯವಲ್ಲ, ಬದಲಿಗೆ ಇಂದಿನ ಸ್ಪರ್ಧಾತ್ಮಕ ಜಗತ್ತಿಗೆ ಬೇಕಾದ ಕೌಶಲ್ಯಗಳನ್ನು ಬೆಳೆಸಿಕೊಳ್ಳುವುದು ಅತ್ಯಗತ್ಯ. ಈ ನಿಟ್ಟಿನಲ್ಲಿ ಈ ಕೌಶಲ್ಯ ಅಭಿವೃದ್ಧಿ ಕೇಂದ್ರವು ಕಲ್ಯಾಣ ಕರ್ನಾಟಕದ ಭಾಗದ ಯುವಜನತೆಗೆ ನೆರವಾಗಲಿದೆ ಎಂದು ಸಚಿವರು ಆಶಯ ವ್ಯಕ್ತಪಡಿಸಿದರು.

ಕಲಬುರಗಿ ಗ್ರಾಮೀಣ ಶಾಸಕ ಬಸವರಾಜ ಮತ್ತಿಮೂಡ ಅಧ್ಯಕ್ಷತೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಶಾಸಕ ಜಗದೇವ ಗುತ್ತೇದಾರ, ಕಲಬುರಗಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮಜಹರ್ ಆಲಂ ಖಾನ್, ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್, ಜಿಲ್ಲಾ ಪಂಚಾಯತ್ ಸಿ.ಇ.ಓ ಭಂವರಸಿಂಗ್ ಮೀನಾ, ಮಹಾನಗರ ಪಾಲಿಕೆ ಆಯುಕ್ತ ಅವಿನಾಶ್ ಸಿಂಧೆ, ಗುಲಬರ್ಗಾ ವಿ.ವಿ. ಕುಲಪತಿ ಪ್ರೊ. ಶಶಿಕಾಂತ್ ಎಸ್. ಉಡಿಕೇರಿ, ಕುಲಸಚಿವ ಪ್ರೊ. ರಮೇಶ್ ಲಂಡನಕರ್, ಮೌಲ್ಯಮಾಪನ ಕುಲಸಚಿವ ಡಾ. ಎನ್. ಜಿ. ಕಣ್ಣೂರು ಸೇರಿದಂತೆ ವಿ.ವಿ. ಬೋಧಕ-ಬೋಧಕೇತರ ವೃಂದ, ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಮುಂಗನಸು ಕೃತಿ ವರ್ತಮಾನದ ತಲ್ಲಣಗಳ ಪ್ರತಿಬಿಂಬ: ಡಾ. ಚಿದಾನಂದ ಚಿಕ್ಕಮಠ



ಕಲಬುರಗಿ,ಮಾ.16-

ಕಲಬುರಗಿ ಸಾಂಸ್ಕೃತಿಕ ಪ್ರತಿಷ್ಠಾನ ವತಿಯಿಂದ ಹಿರಿಯ ಸಾಹಿತಿ ರೇವಣಸಿದ್ದಪ್ಪ ದುಕಾನ ಅವರು ರಚಿಸಿದ ''ಮುಂಗನಸು'' ಕವನ ಸಂಕಲನದ ಜನಾರ್ಪಣೆ ಕಾರ್ಯಕ್ರಮ ರವಿವಾರ ಸಂಜೆ ನಗರದ ಕಲಾಮಂಡಳದಲ್ಲಿ ನೆರವೇರಿತು.

ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತಿನ ಹಿರಿಯ ಉಪಾಧ್ಯಕ್ಷರಾದ ಅಪ್ಪಾರಾವ ಅಕ್ಕೋಣೆ ಅವರು ಕೃತಿಯನ್ನು ಜನಾರ್ಪಣೆಗೊಳಿಸಿದರು.

ಕೃತಿ ಕುರಿತು ಮಾತನಾಡಿದ ಶರಣಬಸವ ವಿಶ್ವವಿದ್ಯಾಲಯದ ಪ್ರಾಧ್ಯಾಪಕರಾದ ಡಾ.ಚಿದಾನಂದ ಚಿಕ್ಕಮಠ ಅವರು, ''ಮುಂಗನಸು'' ಕವನ ಸಂಕಲನವು ವರ್ತಮಾನದ ಹಲವು ತಲ್ಲಣಗಳನ್ನು ಪ್ರತಿಬಿಂಬಿಸುತ್ತದೆ ಎಂದು ಹೇಳಿದರು.

ಕೃತಿಯಲ್ಲಿರುವ ಅನೇಕ ಕವಿತೆಗಳು ಇಂದಿನ ಕಲುಷಿತ ಪರಿಸರದ ಬಗ್ಗೆ ಕಳಕಳಿ ವ್ಯಕ್ತಪಡಿಸುವುದರ ಜೊತೆಗೆ ಸಾಮರಸ್ಯ, ಹಸಿವು, ಪ್ರೀತಿ, ತಂದೆತಾಯಿ ಹಾಗೂ ಗುರುವಿನ ಆಶೀರ್ವಾದಗಳ ಮಹತ್ವವನ್ನು ಕವಿತೆಗಳ ಮೂಲಕ ಲೇಖಕರು ಅಭಿವ್ಯಕ್ತಿಸಿದ್ದಾರೆ ಎಂದು ಅವರು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಡಾ.ವಿಜಯಕುಮಾರ ಪರುತೆ ವಹಿಸಿದ್ದರು. ಮಡಿವಾಳಪ್ಪ ಹಣಮಗೊಂಡ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಶಿಕ್ಷಣ ಇಲಾಖೆಯ ನಿವೃತ್ತ ನಿರ್ದೇಶಕರಾದ ಬಸವರಾಜ ಗೌನಳ್ಳಿ ಮುಖ್ಯ ಅತಿಥಿಗಳಾಗಿ ಮಾತನಾಡಿದರು. ಕಲಬುರಗಿ ಸಾಂಸ್ಕೃತಿಕ ಪ್ರತಿಷ್ಠಾನದ ಅಧ್ಯಕ್ಷರಾದ ಸಾಹಿತಿ ಮತ್ತು ಸಂಘಟಕರಾದ ಬಿ.ಎಚ್. ನಿರಗುಡಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ಗುರುಪ್ರಸಾದ ದುಕಾನ ಸಭಿಕರನ್ನು ಸ್ವಾಗತಿಸಿದರು. ರೇವಣಸಿದ್ದಯ್ಯ ನರನಾಳ ವಂದಿಸಿದರು. ಡಾ.ಶ್ವೇತಾ ಗುರುಪ್ರಸಾದ ದುಕಾನ ನಿರೂಪಿಸಿದರು.

ಈ ಸಂದರ್ಭದಲ್ಲಿ ಹಿರಿಯ ಸಾಹಿತಿಗಳಾದ ಡಾ.ಹಣಮಂತರಾವ ದೊಡ್ಡಮನಿ, ಡಾ.ಗವಿಸಿದ್ದಪ್ಪ ಪಾಟೀಲ್, ಡಾ.ಟಿ.ಗುರುಬಸಪ್ಪ, ಡಾ.ಕಾಶಿನಾಥ ಬಿರಾದಾರ, ಡಾ.ಎಸ್.ಎಸ್.ಗುಬ್ಬಿ, ಎಚ್.ಎಸ್.ಕೌಂಟೆ, ವಿಜಯಕುಮಾರ್ ಹಂಚಿನಾಳ, ಶ್ರೀಶೈಲ ಬೋನಾಳ, ಬಸವರಾಜ ಗಾಣೂರೆ, ರವೀಂದ್ರರೆಡ್ಡಿ, ಶ್ರೀಶೈಲ ಮದಾನೆ, ಡಾ.ನಾಗಪ್ಪ ಗೋಗಿ, ಸಿದ್ದರಾಮಯ್ಯಮಠ ಸೇರಿದಂತೆ ಅನೇಕ ಸಾಹಿತ್ಯಾಸಕ್ತರು ಉಪಸ್ಥಿತರಿದ್ದರು.

ಒಂದನೇಯ ಪುಟದಿಂದ

ವಿಷಪೂರಿತ ಕಲಬೆರಿಕೆ ಸೇಂಧಿ ಮಾರಾಟ ,63 ಲೀಟರ್ ಜಪ್ತಿ, ಆರೋಪಿ ಬಂಧನ

ಫರ್ಹಾನ್ (571) ಹಾಗೂ ಮಂಜುನಾಥ (428) ತಂಡ ಸಂಜೆ 5 ಗಂಟೆಗೆ ಠಾಣೆಯಿಂದ ತೆರಳಿ 5.10ಕ್ಕೆ ಸ್ಥಳಕ್ಕೆ ತಲುಪಿತು.

ಸಂಜೆ 5.15ರಿಂದ 6.15 ಗಂಟೆಯವರೆಗೆ ನಡೆದ ದಾಳಿಯಲ್ಲಿ ಆರೋಪಿಯ ವಶದಲ್ಲಿದ್ದ ಲೀಟರಿಗೆ ರೂ.30ರಂತೆ ಮಾರಾಟ ಮಾಡುತ್ತಿದ್ದ ಸುಮಾರು 63 ಲೀಟರ್ ಕಲಬೆರಿಕೆ ಸೇಂಧಿ (ಅಂದಾಜು ಮೌಲ್ಯ ರೂ.1890) ಹಾಗೂ ಮಾರಾಟದಿಂದ ಬಂದ ರೂ.150 ನಗದು ಹಣವನ್ನು ಜಪ್ತಿ ಮಾಡಲಾಗಿದೆ.

ಈ ಸಂಬಂಧ ಪಶ್ಚಿಮ ಪೊಲೀಸ್ ಠಾಣೆಯಲ್ಲಿ ಅಪರಾಧ ಸಂಖ್ಯೆ 34/2026 ದಾಖಲಿಸಿ ಭಾರತೀಯ ನ್ಯಾಯ ಸಂಹಿತೆ (-2023) ಯ ಸೆಕ್ಷನ್ 275, 286, 123 ಹಾಗೂ ಕರ್ನಾಟಕ ಅಬಕಾರಿ ಕಾಯ್ದೆಯ 32 ಮತ್ತು 34 ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ. ಆರೋಪಿಯನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಪತ್ರಕರ್ತರ ಆರೋಗ್ಯ ವಿಮೆಗೆ ಪಾಲಿಕೆ ಬಜೆಟ್‌ನಲ್ಲಿ ಅನುದಾನ ಮೀಸಲಿಗೆ ಬೇಡಿಕೆ

ಕೈಗೊಂಡಿರುವುದನ್ನು ಸ್ಮರಿಸಿ, ಅದನ್ನು ಈ ವರ್ಷದ ಬಜೆಟ್‌ನಲ್ಲಿ ಮರು ಮೀಸಲಿಟ್ಟು ಯೋಜನೆಯನ್ನು ಅನುಷ್ಠಾನಗೊಳಿಸಬೇಕು ಎಂದು ಒತ್ತಾಯಿಸಲಾಯಿತು.

ಇದೇ ವೇಳೆ ರಾಯಚೂರು ರಿಪೋರ್ಟರ್ಸ್ ಗಿಲ್ಡ್ ವತಿಯಿಂದ ಪತ್ರಕರ್ತರಿಗಾಗಿ ಆರಂಭಿಸಿರುವ ತುರ್ತು ನಿಧಿಗೆ ಸಹಾಯವಾಗುವಂತೆ ಮಹಾನಗರ ಪಾಲಿಕೆಯ ಬಜೆಟ್‌ನಲ್ಲಿ ರೂ.10 ಲಕ್ಷ ಅನುದಾನ ಒದಗಿಸಲು ಮನವಿ ಮಾಡಲಾಯಿತು. ಈ ನಿಧಿಯ ಮೂಲಕ ಇತ್ತೀಚೆಗೆ ಹೃದಯಾಘಾತದಿಂದ ಮೃತಪಟ್ಟ ಹಿರಿಯ ಪತ್ರಕರ್ತರ ಕುಟುಂಬಕ್ಕೆ ಪರಿಹಾರಧನ ವಿತರಿಸಿ ನೆರವಾಗಿರುವುದನ್ನು ಕೂಡ ಗಮನಕ್ಕೆ ತರಲಾಯಿತು.

ಈ ಸಂದರ್ಭದಲ್ಲಿ ಹಿರಿಯ ಪತ್ರಕರ್ತರು, ಕಾರ್ಯನಿರತ ಪತ್ರಕರ್ತರ ಸಂಘದ ಪದಾಧಿಕಾರಿಗಳು ಹಾಗೂ ರಾಯಚೂರು ರಿಪೋರ್ಟರ್ಸ್ ಗಿಲ್ಡ್‌ನ ಸದಸ್ಯರು ಉಪಸ್ಥಿತರಿದ್ದರು.

ದಿ. 30,31ರಂದು ಕರ್ನಾಟಕ ರೈತ ಸಂಘ 8 ನೇ ರಾಜ್ಯ ಸಮ್ಮೇಳನ

ನಾಯ ಸಿದ್ದನಗೌಡ ಪಾಟೀಲ್,ರಾಘವೇಂದ್ರ ಕುಷ್ಠಗಿ ಸೇರಿದಂತೆ ಅನೇಕ ಕಾರ್ಮಿಕ ಹಾಗೂ ರೈತ ಮುಖಂಡರು ಭಾಗವಹಿಸಲಿದ್ದಾರೆಂದರು.ರಾಜ್ಯದಲ್ಲಿ ಭೂ ಮಂಜುರಾತಿಗಾಗಿ ಒಟ್ಟು 33 ಲಕ್ಷ ಅರ್ಜಿಗಳನ್ನು ಸಲ್ಲಿಸಿದ್ದಾರೆ. ಈ 33 ಲಕ್ಷ ಅರ್ಜಿಗಳಲ್ಲಿ ಕೇವಲ ಒಂದುವರೆ ಲಕ್ಷ ಅರ್ಜಿಗಳನ್ನು ಮಾತ್ರ ಭೂ ಮಂಜೂರಾತಿಗೆ ಅರ್ಹವೆಂದು ತೀರ್ಮಾನಿಸಲಾಗಿದೆ. 18 ಲಕ್ಷ ಅರ್ಜಿಗಳನ್ನು ತಿರಸ್ಕರಿಸಲಾಗಿದೆ. 13 ಲಕ್ಷ ಅರ್ಜಿಗಳನ್ನು ಪೆಂಡಿಂಗ್ ಇಡಲಾಗಿದೆ. ಲಕ್ಷಾಂತರ ಎಕರೆ ಸಾಗುಳಿದಾರರ ಭೂಮಿಯನ್ನು ಕಾರ್ಪೊರೇಟ್ ಕಂಪನಿಗಳಿಗೆ ಉಚಿತವಾಗಿ ಧಾರೆಯರೆಯುವ ಉದ್ದೇಶದಿಂದ ಇಷ್ಟು ದೊಡ್ಡಮಟ್ಟದ ಅರ್ಜಿಗಳನ್ನು ತಿರಸ್ಕರಿಸಲಾಗಿದೆ.ಕರ್ನಾಟಕ ರೈತ ಸಂಘ ನೇತೃತ್ವದಲ್ಲಿ ಕಳೆದ 30 ವರ್ಷಗಳಿಂದ ಭೂ ಹೋರಾಟ ನಡೆಸಿ, ರಾಜ್ಯದಲ್ಲಿ ಸಾವಿರಾರು ಎಕರೆ ಸರ್ಕಾರಿ ಭೂಮಿಯನ್ನು ಬಡ ರೈತರಿಗೆ ಹಂಚಿಕೆ ಮಾಡಲಾಗಿದೆ. ಮುಂದಿನ ದಿನಗಳಲ್ಲಿ ಕಾರ್ಪೊರೇಟ್ ಪರವಾದ ಕೃಷಿ ಕಾಯ್ದೆಗಳನ್ನು ವಿರೋಧಿಸಿ ಹೋರಾಡಲು, ಹಾಗೂ ಎಲ್ಲಾ ರೀತಿಯ ಸರ್ಕಾರಿ ಭೂಮಿ ಮಂಜೂರಾತಿಗಾಗಿ ಬಲಿಷ್ಠ ಚಳುವಳಿಗಾಗಿ ಜನರನ್ನು ಸಜ್ಜುಗೊಳಿಸಬೇಕಾಗಿದೆ ಎಂದರು.ಘೋಷಣೆಗಳು: ಭಾರತದ ಕೃಷಿ ಕ್ಷೇತ್ರವನ್ನು ಕಾರ್ಪೊರೇಟ್ ಕಂಪನಿಗಳಿಗೊಪ್ಪಿಸುವ ಮತ್ತು ರೈತಾಪಿಗಳಿಗೆ ಮರಣ ಶಾಸನವಾಗಲಿರುವ ಕೃಷಿ ತಿದ್ದುಪಡಿ ಕಾಯ್ದೆಗಳು ವಾಪಸಾಗಲಿ.ರಾಜ್ಯದ ರೈತರ ಭೂಮಿಯನ್ನು ಬಲವಂತವಾಗಿ ಸ್ವಾಧೀನ ಪಡಿಸಿಕೊಳ್ಳುವ 2020ರಲ್ಲಿ ರಾಜ್ಯ ಸರ್ಕಾರ ಜಾರಿಗೊಳಿಸಿದ ಭೂ ಸುಧಾರಣೆ ತಿದ್ದುಪಡಿ ಕಾಯ್ದೆ ರದ್ದಾಗಲಿ.ಅರಣ್ಯ ಭೂಮಿಯಿಂದ ಆದಿವಾಸಿಗಳನ್ನು ಒಕ್ಕಲೆಬ್ಬಿಸಬಾರದು. ಮಲೆನಾಡು ಪ್ರದೇಶದ ಭೂಮಿಯನ್ನು ಕಾರ್ಪೊರೇಟ್ ಕಂಪನಿಗಳಿಗೆ ಗುತ್ತಿಗೆ ಕೊಡುವ ತೀರ್ಮಾನ ಹಿಂಪಡೆಯಬೇಕು ಸೇರಿದಂತೆ ಅನೇಕ ಬೇಡಿಕೆಗಳು ಈಡೇರಿದಲು ಒತ್ತಾಯಿಸಲಾಗುವುದೆಂದರು.

ಈ ಸಂದರ್ಭದಲ್ಲಿ ಸಮ್ಮೇಳನ ಸ್ವಾಗತ ಸಮಿತಿ ಅಧ್ಯಕ್ಷ ಖಾಜಾ ಅಸ್ಲಂ ಅಹ್ಮದ್,ಎಂ.ಆರ್.ಬೇರಿ,ಅಶೋಕ ನಿಲೋಗಲ್,ಚಿಟ್ಟಿ ಬಾಬು,ಶ್ರೀನಿವಾಸ್ ಕೊಪ್ಪದ್ ಉಪಸ್ಥಿತರಿದ್ದರು.

ಲಿಂಗಸುಗೂರು ಗುತ್ತಿಗೆ ಕಾರ್ಮಿಕರನ್ನು ಖಾಯಂ ಗೊಳಿಸಲು ಆಗ್ರಹಿಸಿ ಎ.13ರಂದು ಬೃಹತ್ ಸಮಾವೇಶ

ಕಾನೂನುಬಾಹೀರವಾಗಿ ದುಡಿಸಲಾಗುತ್ತಿದೆ ಎಂದು ಆರೋಪಿಸಿದರು.

ಹೊಸ ಕಾರ್ಮಿಕ ಕಾಯ್ದೆಗಳು ಭಾರತದ ಕಾರ್ಮಿಕ ವರ್ಗಕ್ಕೆ ಮರಣ ಶಾಸನಗಳಾಗಿವೆ. ಇವುಗಳ ರದ್ದತಿಗಾಗಿ ಹೋರಾಡಬೇಕು. ಹಾಗೆಯೇ, ಗುತ್ತಿಗೆ ಕಾರ್ಮಿಕ ಪದ್ದತಿಯ (ರದ್ದತಿ ಹಾಗೂ ನಿಯಂತ್ರಣ) ಕಾಯ್ದೆ 1970 ಸೆಕ್ಷನ್ 10ರ ಪ್ರಕಾರ ಕಾರ್ಮಿಕರ ಖಾಯಂಗೊಳಿಸಲು ಅವಕಾಶ ಕಲ್ಪಿಸಿದರೂ, ರಾಜ್ಯ ಸರಕಾರವು ಕಾನೂನು ಬಾಹೀರವಾಗಿ ಈ ಪದ್ದತಿಯನ್ನು ಮುಂದುವರೆಸಿದೆ. ಇದನ್ನು ಕಿತ್ತಿ ಹಾಕುವ ಗಟ್ಟಿಮುಟ್ಟಾದ ಚಳುವಳಿ ಕಟ್ಟಿ ಎಂದರು.

ಇದೇ ವೇಳೆ ಹಳೆಯ ಜಿಲ್ಲಾ ಸಮಿತಿಯನ್ನು ವಿಸರ್ಜಿಸಿ, 17 ಸದಸ್ಯ ಬಲದ ನೂತನ ಜಿಲ್ಲಾ ಸಮಿತಿಯನ್ನು ಆಯ್ಕೆ ಮಾಡಲಾಯಿತು.

ಟಿಯುಸಿಐನ ರಾಯಚೂರು ಜಿಲ್ಲಾ ಅಧ್ಯಕ್ಷರಾಗಿ ಕಾಂ.ಜಿ.ಅಡವಿರಾವ್ ಹಾಗೂ ಜಿಲ್ಲಾ ಕಾರ್ಯದರ್ಶಿಯಾಗಿ ಕಾಂ.ಡಿ.ಕೆ. ಲಿಂಗಸೂಗೂರು, ಜಿಲ್ಲಾ ಉಪಾಧ್ಯಕ್ಷರಾಗಿ ಕಾಂ.ಜಿ ತಿಪ್ಪರಾಜ್(1), ಕಾಂ.ದೇವಮ್ಮ ಈಚನಾಳ(2), ಜಿಲ್ಲಾ ಸಂಘಟನಾ ಕಾರ್ಯದರ್ಶಿಯಾಗಿ ಕಾಂ.ಸಿದ್ದಪ್ಪಗೌಡ ಗಿಲ್ಲೆಸಗೂರು(1), ಕಾಂ.ಬಸವರಾಜ ಹಿರೆಹೆಸರೂರು(2), ಜಿಲ್ಲಾ ಖಜಂಚಿಯಾಗಿ ಕಾಂ.ಹನುಮಂತಪ್ಪ ಬೂದಿವಾಳ ಹಾಗೆಯೇ ಜಿಲ್ಲಾ ಕಾರ್ಯನಿರ್ವಾಹಕ ಸಮಿತಿಯ ಸದಸ್ಯರಾಗಿ ಕಾಂ.ನಸ್ರಿನಾ, ಕಾಂ.ರಂಗನಾಥ ಮಸ್ಕಿ, ಕಾಂ.ಹೆಚ್. ಆರ್. ಹೊಸಮನಿ, ಕಾಂ.ಮಾಬುಸಾಬ ಸಿಂಧನೂರು, ಕಾಂ.ಖಿಜಾಸಾಬ್ ಕವಿತಾಳ, ಕಾಂ.ಮಲ್ಲೇಶ್ ಎಮ್ಮಡಗಿ, ಕಾಂ.ರಮೇಶ್ ವಿಂಡ್ ಪರ್ವ, ಕಾಂ.ಹುಲುಗಪ್ಪ ಬಳ್ಳಾರಿ ಹಾಗೂ ಕಾಂ.ದುರುಗಪ್ಪ ಸಿಂಧನೂರು ಆಯ್ಕೆ ಮಾಡಲಾಯಿತು.

ಈ ಸಂದರ್ಭದಲ್ಲಿ ಎಂ.ಗಂಗಾಧರ, ರಾಜ್ಯ ಉಪಾಧ್ಯಕ್ಷರಾದ ಟಿಯುಸಿಐ, ಆದೇಶ ನಗನೂರು ಸೇರಿ ಇತರರು ಇದ್ದರು.

ವಿಶ್ವ ಗ್ರಾಹಕರ ದಿನಾಚರಣೆ 2026ರ ಕಾರ್ಯಕ್ರಮಕ್ಕೆ ಚಾಲನೆ

ಪರಿಸರ ಸಂರಕ್ಷಣೆಗೆ ಪ್ರತಿಯೊಬ್ಬರೂ ಕಾಳಜಿ ವಹಿಸಿ: ನ್ಯಾ.ಹೆಚ್.ಎ.ಸಾತ್ವಿಕ್

ಮೇಲೆ ಒತ್ತಡ ಉಂಟಾಗುತ್ತದೆ. ಜಿಲ್ಲೆಯಲ್ಲಿ ಇದಕೂ ಮುಂಚೆ ಪ್ರತಿ ತಿಂಗಳು 6-7 ಸಾವಿರ ಬುಕಿಂಗ್ ಆಗುತ್ತಿದ್ದು, ಪ್ರಸ್ತುತ 10-12 ಸಾವಿರಕ್ಕೂ ಹೆಚ್ಚಿನ ಮಟ್ಟದಲ್ಲಿ ಬುಕ್ಕಿಂಗ್ ಆಗುತ್ತಿವೆ. ಎಲ್ಲರಿಗೂ ಎಲ್‌ಪಿಜಿ ದೊರೆಯುತ್ತದೆ. ಯಾರು ಆತಂಕಕ್ಕೆ ಒಳಗಬಾರದೆಂದು ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪ ನಿರ್ದೇಶಕರಾದ ನಜೀರ್ ಅಹಮದ್ ಅವರು ಹೇಳಿದರು.

ಸಾರ್ವಜನಿಕರಿಗೆ ಜಾಗೃತಿ: ಕರ್ನಾಟಕ ಆಹಾರ ನಾಗರಿಕ ಮತ್ತು ಸರಬರಾಜು ನಿಗಮ ನಿಯಮಿತದಿಂದ ಸಾರ್ವಜನಿಕ ವಿತರಣೆಯಡಿ ವಿತರಿಸಲಾದ ಸಾರವರ್ಧಿತ ಅಕ್ಕಿಯ ಕುರಿತು, ಕಾನೂನು ಮಾಪನ ಶಾಸ್ತ್ರ ಇಲಾಖೆಯಿಂದ ತೂಕ ಮತ್ತು ಅಳತೆ ಹಾಗೂ ಮೆ: ಸುಮಂತ್ ಫ್ಲಾಮೋಜನ್ ಇಂಡೇನ್ ಗ್ಯಾಸ್ ಏಜೆನ್ಸಿ ಯಿಂದ ಪ್ರಧಾನ ಮಂತ್ರಿ ಉಜ್ವಲ ಯೋಜನೆಯಡಿಯ ಎಲ್.ಪಿ.ಜಿ ಸುರಕ್ಷತೆ ಕುರಿತು ಸಾರ್ವಜನಿಕರಿಗೆ ಜಾಗೃತಿ ಮೂಡಿಸಲಾಯಿತು.

ಈ ವೇಳೆ ವಕೀಲರಾದ ತಿಮ್ಮಪ್ಪ ಹಾಗೂ ಕುಮಾರಿ ಮೋನಿಷಾ ಅವರಿಂದ ವಿಶ್ವ ಗ್ರಾಹಕರ ದಿನಾಚರಣೆ 2026ರ ಕಾರ್ಯಕ್ರಮ ಕುರಿತು ವಿಶೇಷ ಉಪನ್ಯಾಸನ ನೀಡಿದರು.

ಸಂದರ್ಭದಲ್ಲಿ ಜಿಲ್ಲಾ ನ್ಯಾಯವಾದಿಗಳ ಸಂಘದ ಉಪಾಧ್ಯಕ್ಷರಾದ ನರ್ಜೀ, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಸಹಾಯಕ ರಿಜಿಸ್ಟಾರ್ ಮತ್ತು ಸಹಾಯಕ ಆಡಳಿತಾಧಿಕಾರಿಗಳಾದ ಚಂದ್ರಕಾತ,

ಕಾನೂನು ಮಾಪನ ಶಾಸ್ತ ಇಲಾಖೆಯ ಸಹಾಯಕ ನಿಯಂತ್ರಕರಾದ ಅಮೃತಾ ಪಿ.ಚವ್ಹಾಣ, ಕರ್ನಾಟಕ ಆಹಾರ ನಾಗರಿಕ ಮತ್ತು ಸರಬರಾಜು ನಿಗಮ ನಿಯಮಿತದ ಜಿಲ್ಲಾ ವ್ಯವಸ್ಥಾಪಕರಾದ ಪ್ರಕಾಶ್, ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆಯ ವ್ಯವಸ್ಥಾಪಕರಾದ ಶ್ರೀ ಹರೀಶ್, ಪ್ರಥಮ ದರ್ಜೆ ಸಹಾಯಕರಾದ ಜಿ.ಹರೀಶ್ ಸೇರಿದಂತೆ ಅಂಗನವಾಡಿ ಕಾರ್ಯಕರ್ತೆಯರು, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಇದ್ದರು.

ಬಸವಣ್ಣ ಅಕ್ಕಮಹಾದೇವಿಗೆ ಅವಮಾನ ಬಸವ ಕೇಂದ್ರ ಖಂಡನೆ

ಸಿಂಧನೂರು. ಮಾ.15-

ಬಸವಣ್ಣ ಹಾಗು ಅಕ್ಕ ಮಹಾದೇವಿ ಬಗ್ಗೆ ಕೆಟ್ಟದಾಗಿ ಟೀಕೆ ಮಾಡಿದ ರಮಾಕಾಂತ ಎನ್ನುವವನನ್ನು ತಕ್ಷಣ ಬಂಧಿಸಿ ಕಠಿಣ ಕ್ರಮ ಕೈಗೊಳ್ಳುವಂತೆ ಬಸವ ಕೇಂದ್ರ ಮುಖಂಡರು ಒತ್ತಾಯ ಮಾಡಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿ ಗೋಷ್ಟಿ ನಡೆಸು ಮಾತನಾಡಿದ ಮುಖಂಡರು ಕಂದಾಚಾರ. ಅಸಮಾನತೆ..ಮೂಡನಂಬಿಕೆ.ಜಾತಿ ಪದ್ದತಿ.ಅಸ್ಪೃಶ್ಯತೆ ಹೋಗಲಾಡಿಸಲು ಹೋರಾಟ ಮಾಡಿದ ಬಸವಣ್ಣ ಹಾಗೂ ಅಕ್ಕ ಮಹಾದೇವಿ ಎಂದರು.

ಬಸವಾದಿ ಶರಣರ ಬಗ್ಗೆ ಅಶ್ಲೀಲವಾಗಿ ನಿಂದನೆ ಮಾಡಿದ್ದನ್ನು ಬಸವ ಕೇಂದ್ರ ಉಗ್ರರವಾಗಿ ಖಂಡಿಸುತ್ತೇದೆ ಇದು ಬಸವಾದಿ ಶರಣರಿಗೆ ಮಾಡಿದ ಅವಮಾನ ವಾಗಿದೆ ಎಂದರು.

ರಮಾಕಾಂತ ಅವರ ಮೇಲೆ ಪ್ರಕರಣ ದಾಖಲಿಸಿ ಬಂಧಿಸಬೇಕು ಎಂದು ಸರ್ಕಾರ ವನ್ನು ಒತ್ತಾಯ ಮಾಡಿದ ಅವರು ಸಾಮಾಜಿಕ ಜಾಲ ತಾಣಗಳ ನಿಯಂತ್ರಣ ಕಾಯ್ದೆ ಜಾರಿಗೆ ತರಬೇಕು ಎಂದರು.

ಬಸವ ಕೇಂದ್ರ ತಾಲುಕಾ ಅಧ್ಯಕ್ಷರಾದ ಕರೆಗೌಡ ಕುರಕುಂದಿ. ಉಪಾಧ್ಯಕ್ಷರಾದ ಬಸಲಿಂಗಪ್ಪ ಬಾದರ್ಲಿ ಜಾಗತಿಕ ಲಿಂಗಾಯತ ಮಹಾ ಸಭಾದ ಬಸವರಾಜ ಕುರಕುಂದಿ. ಜಾಗತಿಕ ಲಿಂಗಾಯತ ಮಹಾಸಭಾದ ಬಸನಗೌಡ ಬಸ್ಸಾಪುರು. ಬಸವ ಕೇಂದ್ರದ ಮುಖಂಡರಾದ ಹೆಚ್ ಜಿ ಹಂಪಣ್ಣ. ಎಚ್ ಬಸವರಾಜ ವಕೀಲ ಚಂದ್ರ ಗೌಡ ಹರೇಟನೂರು ಸೇರಿದಂತೆ ಇನ್ನಿತರು ಇದ್ದರು.

ಫ್ಯಾನ್ಸಿ ಅಂಗಡಿಯಲ್ಲಿ ನೋವು ನಿವಾರಕ ಮಾತ್ರೆಗಳ ಅಕ್ರಮ ಮಾರಾಟ : ಪ್ರಕರಣ ದಾಖಲು

ಗಂಗಾವತಿ,ಮಾ.16-

ವೈದ್ಯರ ಚೀಟಿ ಇಲ್ಲದೆ ನೋವು ನಿವಾರಕ ಮಾತ್ರೆಗಳನ್ನು ಅಕ್ರಮವಾಗಿ ಮಾರಾಟ ಮಾಡುತ್ತಿದ್ದ ಫ್ಯಾನ್ಸಿ ಅಂಗಡಿ ಮಾಲಕನ ವಿರುದ್ಧ ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ನಗರದ ನೀಲಕಂಠೇಶ್ವರ ಕ್ಯಾಂಪ್ ಪ್ರದೇಶದ ಶಾಮಿಯಾನ ಕಾರ್ಮಿಕನೊಬ್ಬ ಮೈಕೈ ನೋವಿಗಾಗಿ ಸ್ನೇಹಿತರ ಸಲಹೆಯಂತೆ ಕೆಲವು ನೋವು ನಿವಾರಕ ಮಾತ್ರೆಗಳನ್ನು ಸೇವಿಸಲು ಆರಂಭಿಸಿದ್ದನು. ಕ್ರಮೇಣ, ಅವನು ಆ ಮಾತ್ರೆಗಳ ಅಮಲಿಗೆ ಒಳಗಾಗಿದ್ದಾನೆ ಎನ್ನಲಾಗಿದೆ. ಹೆಚ್ಚಿನ ಪ್ರಮಾಣದ ಅಮಲು ಪಡೆಯಲು, ಅವನು ಮಾತ್ರೆಗಳನ್ನು ಪುಡಿ ಮಾಡಿ ನೀರಿನಲ್ಲಿ ಕಲಸಿ ಇಂಜೆಕ್ಷನ್ ಮೂಲಕ ನರಗಳಿಗೆ ಚುಚ್ಚಿಸುತ್ತಿದ್ದನೆಂದು ಪೊಲೀಸರು ತಿಳಿಸಿದ್ದಾರೆ.

ದುರ್ಗಾದೇವಿ ಗುಡಿ ಸಮೀಪದ ಕೃಷ್ಣಾ ಫ್ಯಾನ್ಸಿ ಸ್ಟೋರ್ನ ಕಿಶನ್ ಕುಮಾರ್ ಎಂಬಾತ ವೈದ್ಯರ ಚೀಟಿ

ಇಲ್ಲದೆ ಮಾತ್ರೆಗಳನ್ನು ಮಾರಾಟ ಮಾಡುತ್ತಿದ್ದನೆಂಬ ಆರೋಪ ದಾಖಲಾಗಿದ್ದು, ಎರಡು ಮಾತ್ರೆಗಳಿಗೆ 300 ರೂ. ಪಡೆಯುತ್ತಾ ಮಾರಾಟ ಮಾಡುತ್ತಿದ್ದಾನೆ ಎಂಬ ಮಾಹಿತಿ ದೊರಕಿದೆ.

ಈ ಚಟಕ್ಕೆ ಒಳಗಾದ ಕೆಲವು ಯುವಕರ ಆರೋಗ್ಯ ಹದಗೆಟ್ಟಿದ್ದು, ಹಣಕ್ಕಾಗಿ ಮನೆಯಲ್ಲಿಯೇ ಕಳ್ಳತನ ಮಾಡುವ ಮಟ್ಟಕ್ಕೂ ಇಳಿದಿದ್ದಾರೆ ಎಂಬ ಮಾಹಿತಿ ಪೊಲೀಸರು ಪಡೆದಿದ್ದಾರೆ.

ಸಂತ್ರಸ್ತ ಯುವಕ ನೀಡಿದ ದೂರಿನ ಮೇರೆಗೆ, ನಗರ ಠಾಣೆಯ ಪಿಐ ಪ್ರಕಾಶ ಮಾಳಿ ಪ್ರಕರಣ ದಾಖಲಿಸಿಕೊಂಡು ತನಿಖೆ ಆರಂಭಿಸಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಸಾಹಿಲ್, ಸೋಹೇಬ್ ಸೇರಿದಂತೆ ಹಲವರು ಈ ಜಾಲದಲ್ಲಿ ಸಿಲುಕಿರುವುದು ತನಿಖೆಯಲ್ಲಿ ತಿಳಿದುಬಂದಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಬುರ್ಖಾ ಧರಿಸಿ ಮನೆ ದರೋಡೆ ವದಂತಿ ಸುಳ್ಳು: ಪೊಲೀಸರ ತನಿಖೆಯಲ್ಲಿ ಸತ್ಯ ಬಹಿರಂಗ



ಬಳ್ಳಾರಿ,ಮಾ.16-

ರಮಝಾನ್ ಮಾಸದ ನಿಮಿತ್ತ ದಾನ ಕೇಳುವ ನೆಪದಲ್ಲಿ ಬುರ್ಖಾ ಧರಿಸಿಕೊಂಡ ಇಬ್ಬರು ಮಹಿಳೆಯರು ಹಾಗೂ ಒಬ್ಬ ಪುರುಷ ಮನೆಗೆ ನುಗ್ಗಿ ಮಹಿಳೆಯನ್ನು ಬೆದರಿಸಿ ಬಂಗಾರಬೆಳ್ಳಿ ಆಭರಣಗಳನ್ನು ಕಿತ್ತುಕೊಂಡು ಹೋಗಿದ್ದಾರೆ ಎಂಬ ಮಾಹಿತಿ ಬಳ್ಳಾರಿ ನಗರದ ಗಾಂಧಿನಗರ ಪೊಲೀಸ್ ಠಾಣೆಗೆ ಬಂದಿತ್ತು. ಈ ಕುರಿತು ಪೊಲೀಸರು ತಕ್ಷಣ ತನಿಖೆ ನಡೆಸಿ ಪ್ರಕರಣದ ಸತ್ಯಾಂಶವನ್ನು ಬಹಿರಂಗಪಡಿಸಿದ್ದಾರೆ.

ಮಾ.13, 2026ರಂದು ಗಾಂಧಿನಗರ ಪೊಲೀಸ್ ಠಾಣಾ ವ್ಯಾಪ್ತಿಯ ಹುಸೇನ್ ನಗರ ಪ್ರದೇಶದಲ್ಲಿ ಈ ಘಟನೆ ನಡೆದಿದೆ ಎಂಬ ಮಾಹಿತಿ ಹರಡಿತ್ತು. ಮಾಹಿತಿ ದೊರಕುತ್ತಿದ್ದಂತೆಯೇ ಹಿರಿಯ ಪೊಲೀಸ್ ಅಧಿಕಾರಿಗಳು ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ ಗಾಂಧಿನಗರ ಠಾಣೆಯ ಪೊಲೀಸ್ ಇನ್ಸ್ಪೆಕ್ಟರ್‌ಗೆ ತಕ್ಷಣ ತನಿಖೆ ನಡೆಸುವಂತೆ ಸೂಚಿಸಿದ್ದರು.

ಇದನ್ವಯ ಪೊಲೀಸ್ ಇನ್ಸ್ಪೆಕ್ಟರ್ ರವಿಚಂದ್ರನ್ ಅವರ ನೇತೃತ್ವದಲ್ಲಿ ಡಿಬಿ ಪಿಎಸ್‌ಐ ಕೆ. ವಿರೂಪಾಕ್ಷಪ್ಪ ಹಾಗೂ ಸಿಬ್ಬಂದಿಗಳಾದ ಜಯರಾಮ್, ನಾರಾಯಣ, ರಾಮದಾಸ್, ತಿಮ್ಮಪ್ಪ ಮತ್ತು ಕಾಳಿಂಗಪ್ಪ ಅವರ ತಂಡ ತನಿಖೆ ಆರಂಭಿಸಿತು. ವಿವಿಧ ಆಯಾಮಗಳಲ್ಲಿ ವಿಚಾರಣೆ ನಡೆಸಿದಾಗ ದಾನ ಕೇಳುವ ನೆಪದಲ್ಲಿ ಯಾರೂ ಮನೆಗೆ ನುಗ್ಗಿ ಆಭರಣಗಳನ್ನು ಕಿತ್ತುಕೊಂಡು ಹೋಗಿಲ್ಲ ಎಂಬುದು ಬೆಳಕಿಗೆ ಬಂದಿದೆ.

ತನಿಖೆಯಲ್ಲಿ ಇದು ಕುಟುಂಬದ ಒಳಗಿನ ವಿಷಯಕ್ಕೆ ಸಂಬಂಧಿಸಿದ ಘಟನೆ ಎಂಬುದು ಸ್ಪಷ್ಟವಾಗಿದ್ದು, ಈ ಕುರಿತು ಹರಿದಾಡುತ್ತಿರುವ ವದಂತಿಗಳು ಸತ್ಯವಲ್ಲ ಎಂದು ಪೊಲೀಸರು ಸ್ಪಷ್ಟಪಡಿಸಿದ್ದಾರೆ.

ಈ ಹಿನ್ನೆಲೆಯಲ್ಲಿ ಸಾರ್ವಜನಿಕರು ಇಂತಹ ಸುಳ್ಳು ವದಂತಿಗಳನ್ನು ನಂಬಬಾರದು. ಯಾವುದೇ ಅನುಮಾನಾಸ್ಪದ ವ್ಯಕ್ತಿಗಳು ಅಥವಾ ಮಾಹಿತಿ ಕಂಡುಬಂದಲ್ಲಿ ತಕ್ಷಣ ಪೊಲೀಸ್ ಕಂಟ್ರೋಲ್ ರೂಮ್ (112) ಗೆ ಮಾಹಿತಿ ನೀಡುವಂತೆ ಗಾಂಧಿನಗರ ಪೊಲೀಸರು ಮನವಿ ಮಾಡಿದ್ದಾರೆ.

ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ



ಕಲಬುರಗಿ,ಮಾ..16-

ನಗರದ ದರಿಯಾಪುರ ಬಡಾವಣೆಯಲ್ಲಿರುವ ಶ್ರೀ ಚಂದ್ರಶೇಖರ್ ಡಿ.ಪಾಟೀಲ್ ರೇವೂರ್ ಸ್ಮಾರಕ ಔಷಧ ಭವನದಲ್ಲಿ ಸಂಪೂರ್ಣೇಶ್ವರಿ ಮಹಿಳಾ ಸಬಲೀಕರಣ ಒಕ್ಕೂಟದ ವತಿಯಿಂದ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಸಮಾಜ ಸೇವಕಿ ಲಕ್ಷ್ಮೀ ದತ್ತಾತ್ರೇಯ ಪಾಟೀಲ್ ರೇವೂರ್ ಹಾಗೂ ಕರ್ನಾಟಕ ಬಿಜೆಪಿ ವಕ್ತಾರ ಡಾ.ಸುಧಾ ಆರ್.ಹಾಲಕಾಯಿ ಅವರು ಕಾರ್ಯಕ್ರಮವನ್ನು ಉದ್ಘಾಟಿಸಿದರು.

ಬಳಿಕ ಮಾತನಾಡಿದ ಅವರು, ಸಮಾಜದ ವಿವಿಧ ಕ್ಷೇತ್ರಗಳಲ್ಲಿ ಮಹಿಳೆಯರು ಮಹತ್ತರ ಸಾಧನೆಗಳನ್ನು ಮಾಡುತ್ತಿರುವುದು ಹೆಮ್ಮೆಯ ಸಂಗತಿ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಮಹಿಳಾ ಸಾಧಕರಿಗೆ ''ಸಂಪೂರ್ಣೇಶ್ವರಿ ಸ್ಫೂರ್ತಿದಾಯಕ ಮಹಿಳಾ ಪ್ರಶಸ್ತಿ'' ಪ್ರದಾನ ಮಾಡಲಾಯಿತು. ಅದರಂತೆಯೇ ಸಮಾಜ ಸೇವೆ ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದ ಮಹಿಳೆಯರನ್ನು ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಉಪ ಮೇಯರ್ ತೃಪ್ತಿ ಎಸ್. ಲಾಖೆ, ವಿರೋಧ ಪಕ್ಷದ ನಾಯಕಿ ಶೋಭಾ ಗುರುರಾಜ ದೇಸಾಯಿ, ಡಾ. ಸ್ನೇಹಾ ಕೆ., ಕವಿತಾ ಚೌಹಾಣ್, ಡಾ. ಶ್ವೇತಾ ನಿಧಿ, ಅಮೂಲ್ಯ ಶೆಟ್ಟಿ, ಸ್ನೇಹಲ್ ಪಾಟೀಲ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಸಾಮಾಜಿಕ ಬಹಿಷ್ಕಾರಕ್ಕೆ ಬೇಸತ್ತು ಮಹಿಳೆ ಆತ್ಮಹತ್ಯೆ

ಯಾದಗಿರಿ, ಮಾ. 16-

ಸಾಮಾಜಿಕ ಬಹಿಷ್ಕಾರದಿಂದ ಮನನೊಂದು ಮಹಿಳೆಯೊಬ್ಬರು ಭೀಮಾ ನದಿಗೆ ಹಾರಿ ಆತ್ಮಹತ್ಯೆ ಮಾಡಿಕೊಂಡಿರುವ ದುರ್ಘಟನೆ ಯಾದಗಿರಿ ಜಿಲ್ಲೆಯ ವಡಗೇರ ತಾಲೂಕಿನ ಜೋಳದಡಗಿ ಗ್ರಾಮದಲ್ಲಿ ನಡೆದಿದೆ.

ಯಾದಗಿರಿ ಹೊರವಲಯದ ಗಿರಿನಗರ ನಿವಾಸಿ ಕಮಲಮ್ಮ (42) ಆತ್ಮಹತ್ಯೆ ಮಾಡಿಕೊಂಡ ಮಹಿಳೆ ಎಂದು ಗುರುತಿಸಲಾಗಿದೆ. ಶನಿವಾರ ರಾತ್ರಿ ಜೋಳದಡಗಿ ಬ್ರಿಡ್ಜ್ ಕಂ ಬ್ಯಾರೇಜ್ ಮೇಲಿಂದ ಭೀಮಾ ನದಿಗೆ ಹಾರಿ ಅವರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎನ್ನಲಾಗಿದೆ. ಘಟನೆಯ ಮುನ್ನ ಕಮಲಮ್ಮ ತಮ್ಮ ಮಾಂಗಲ್ಯ ಸರವನ್ನು ತೆಗೆದು ಬ್ಯಾರೇಜ್ ಮೇಲೆಯೇ ಇಟ್ಟಿದ್ದರೆಂದು ತಿಳಿದುಬಂದಿದೆ. ಮೂಲಗಳ ಪ್ರಕಾರ, ಕಮಲಮ್ಮ ಅವರು ಸಿಳ್ಳೆ ಕ್ಯಾತ ಸಮುದಾಯಕ್ಕೆ ಸೇರಿದ್ದು, ಅವರ ಪುತ್ರ ಎರ್ರಿಸ್ವಾಮಿ ವಿರುದ್ಧ ಅನೈತಿಕ ಸಂಬಂಧದ ಆರೋಪ ಹೊರಿಸಿ ಸಮುದಾಯದ ಮುಖಂಡರು ಕುಟುಂಬಕ್ಕೆ ಸಾಮಾಜಿಕ ಬಹಿಷ್ಕಾರ ವಿಧಿಸಿದ್ದಾಗಿ ತಿಳಿದುಬಂದಿದೆ. ಈ ಹಿನ್ನೆಲೆ ಮೀನುಗಾರಿಕೆ ಹಾಗೂ ಮೀನು ಮಾರಾಟಕ್ಕೂ ಅವಕಾಶ ನೀಡದ ಕಾರಣ ಕುಟುಂಬ ಸಂಕಷ್ಟಕ್ಕೆ ಒಳಗಾಗಿತ್ತು. ಈ ವಿಚಾರದಿಂದ ಮನನೊಂದ ಕಮಲಮ್ಮ ಮಗಳ ಊರಾದ ಜೋಳದಡಗಿ ಗ್ರಾಮಕ್ಕೆ ತೆರಳಿ ಆತ್ಮಹತ್ಯೆಗೆ ಶರಣಾಗಿದ್ದಾರೆ ಎಂದು ಹೇಳಲಾಗಿದೆ. ಇಂದು ಮಧ್ಯಾಹ್ನ ಅಗ್ನಿಶಾಮಕ ದಳದ ಸಿಬ್ಬಂದಿ ನದಿಯಿಂದ ಮೃತದೇಹವನ್ನು ಹೊರತೆಗೆದಿದ್ದಾರೆ.

ಈ ಕುರಿತು ವಡಗೇರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ಮುಂದಿನ ತನಿಖೆ ಕೈಗೊಂಡಿದ್ದಾರೆ.

ಹುಣಸಗಿಯಲ್ಲಿ ಸಿಡಿಲಿನ ರುದ್ರನರ್ತನ: ತೆಂಗಿನ ಮರ ಸೀಳಿ ಭಸ್ಮ

ಯಾದಗಿರಿ ,ಮಾ.16-

ಸಿಡಿಲಿನ ಆರ್ಭಟಕ್ಕೆ ಹುಣಸಗಿ ಪಟ್ಟಣದ ನಿವಾಸಿಗಳು ಅಕ್ಷರಶಃ ಬೆಚ್ಚಿಬಿದ್ದಿದ್ದಾರೆ. ರವಿವಾರ ಸಂಜೆ ಆಕಾಶದಿಂದ ಇಳಿದ ಸಿಡಿಲು ತೆಂಗಿನ ಮರವನ್ನು ಗುರಿ ಮಾಡಿದೆ.

ನಡುಗಿದ 12ನೇ ವಾರ್ಡ್! ಸಂಜೆ 7:30ರ ಸುಮಾರಿಗೆ ಕತ್ತಲು ಆವರಿಸುತ್ತಿದ್ದಂತೆ, ಭಾರಿ ಸದ್ದಿನೊಂದಿಗೆ ಮಿಂಚು ಸಂಭವಿಸಿತು. ಇಲ್ಲಿನ ವಾರ್ಡ್ ನಂಬರ್ 12ರ ಮುದನೂರು ಸಾಹುಕಾರ್ ಅವರ ನಿವಾಸದ ಮುಂದಿದ್ದ ಎತ್ತರದ ತೆಂಗಿನ ಮರಕ್ಕೆ ಸಿಡಿಲು ನೇರವಾಗಿ ಅಪ್ಪಳಿಸಿದೆ. ಆ ಕ್ಷಣದಲ್ಲಿ ಉಂಟಾದ ಭಾರಿ ಶಬ್ದಕ್ಕೆ ಇಡೀ ಓಣಿಯೇ ಒಂದು ಕ್ಷಣ ಸ್ತಬ್ದವಾಯಿತು.

ಕ್ಷಣಾರ್ಧದಲ್ಲಿ ತಪ್ಪಿದ ಮಹಾ ದುರಂತ! ಸಿಡಿಲು ಬಡಿದ ತೀವ್ರತೆಗೆ ತೆಂಗಿನ ಮರದ ಹಸಿರು ಗರಿಗಳು ಸುಟ್ಟು ಕರಕಲಾಗಿದ್ದು, ಬೆಂಕಿಯ ಜ್ವಾಲೆ ಕ್ಷಣಾರ್ಧದಲ್ಲಿ ಕಾಣಿಸಿಕೊಂಡಿದೆ.

ಅದೃಷ್ಟದ ಆಟ: ಮನೆಗೆ ಅತಿ ಸಮೀಪದಲ್ಲೇ ಮರವಿದ್ದರೂ, ಸಿಡಿಲು ಮನೆಗೆ ತಗುಲದೆ ಮರಕ್ಕೆ ಅಪ್ಪಳಿಸಿರುವುದು ದೊಡ್ಡ ಅನಾಹುತವನ್ನು ತಪ್ಪಿಸಿದೆ.

ಅದೃಷ್ಟವಶಾತ್ ಘಟನೆಯಲ್ಲಿ ಯಾವುದೇ ಪ್ರಾಣಹಾನಿ ಸಂಭವಿಸಿಲ್ಲ ಎಂದು ತಿಳಿದುಬಂದಿದೆ.

ಆಕಾಶವೇ ಸೀಳಿ ಕೆಳಗೆ ಬಿದ್ದಂತಾಯಿತು!

ಮನೆಯ ಮುಂದೆಯೇ ಸಿಡಿಲು ಬಡಿದ ಶಬ್ದಕ್ಕೆ ಕಿವಿಗಳೇ ಮಂದವಾದವು. ದೇವರ ದಯೆಯಿಂದ ಮನೆಯವರಿಗೆ ಯಾವುದೇ ತೊಂದರೆಯಾಗಿಲ್ಲ, ಎಂದು ಸ್ಥಳೀಯರು ತಮ್ಮ ಆತಂಕ ವ್ಯಕ್ತಪಡಿಸಿದ್ದಾರೆ.

ಮಾಗಣಗೇರಿ ಶಾಲೆಗೆ ಡಿಜಿಟಲ್ ಬೋರ್ಡ್ ಹಸ್ತಾಂತರ



ಯಡ್ರಾಮಿ,ಮಾ.16-

ಮಕ್ಕಳಲ್ಲಿ ಸಮಯಪ್ರಜ್ಞೆ ಇರಬೇಕು. ಅಂದಿನ ಪಾಠವನ್ನು ಅಂದೇ ಓದುವ ಹವ್ಯಾಸವನ್ನು ತಮ್ಮದಾಗಿಸಿಕೊಳ್ಳಬೇಕು. ಉತ್ತಮ ಗುರಿಯನ್ನು ಇಟ್ಟುಕೊಂಡು ಗುರುಗಳ ಮಾರ್ಗದರ್ಶನದಲ್ಲಿ ಶ್ರದ್ದೆ ಮತ್ತು ನಿಷ್ಠೆಯಿಂದ ಕಲಿಯಬೇಕು. ಆಗ ಮಾತ್ರ ಉತ್ತಮ ಭವಿಷ್ಯ ರೂಪಿಸಿಕೊಳ್ಳಲು ಸಾಧ್ಯವಿದೆ ಎಂದು ಯುವಾ ಬೆಂಗಳೂರು ಟ್ರಸ್ಟ್ ಸಂಸ್ಥಾಪಕ ಜಿ.ಕಿರಣ್ ಸಾಗರ್ ತಿಳಿಸಿದರು.

ತಾಲೂಕಿನ ಮಾಗಣಗೇರಿ ಸರ್ಕಾರಿ ಮಾದರಿ ಪ್ರಾಥಮಿಕ ಶಾಲೆಯಲ್ಲಿ ಯುವಾ ಬೆಂಗಳೂರು ಟ್ರಸ್ಟ್ ಹಾಗೂ ಡೈರಿ ಡೇ ಐಸ್‌ಕ್ರೀಮ್ ಸಂಸ್ಥೆಯ ಆಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ಡಿಜಿಟಲ್ ಬೋರ್ಡ್‌ನ ಹಸ್ತಾಂತರ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಯುವಾ ಬೆಂಗಳೂರು ಟ್ರಸ್ಟ್‌ನ ಅಧ್ಯಕ್ಷ ಬಿ.ವಿ. ಸುನಿಲ ಮಾತನಾಡಿ, ಗ್ರಾಮೀಣ ಭಾಗದ ಮಕ್ಕಳು ಇಂದಿನ ಸ್ಪರ್ಧಾ ಯುಗದಲ್ಲಿ ನಗರ ಪ್ರದೇಶದಲ್ಲಿ ಕಲಿತ ಮಕ್ಕಳೊಂದಿಗೆ ಉನ್ನತ ಶಿಕ್ಷಣ ಉದ್ಯೋಗಗಳಿಗಾಗಿ ಸ್ಪರ್ಧೆ ಎದುರಿಸುವುದು ಕಷ್ಟಕರವಾಗಿದೆ. ಮಕ್ಕಳು ಕಲಿಕೆಯಲ್ಲಿ ಶಿಸ್ತು, ಸಮಯ ಪ್ರಜ್ಞೆಯಂತಹ ಗುಣಗಳನ್ನು ರೂಢಿಸಿಕೊಂಡು ಆತ್ಮವಿಶ್ವಾಸದಿಂದ ಕಲಿಯಬೇಕು ಎಂದು ಅವರು ತಿಳಿಸಿದರು.

ಪ್ರಭಾರಿ ಮುಖ್ಯಶಿಕ್ಷಕ ಡಿ.ಸಿ.ಜವಾದಾರ ಮಾತನಾಡಿದರು. ಈ ವೇಳೆ ಶಾಲೆಯ ಮಕ್ಕಳು ಹಾಗೂ ಶಾಲೆ ಶಿಕ್ಷಕರು ಸೇರಿದಂತೆ ಇತರಿದ್ದರು.

ದಕ್ಷಿಣ ವಲಯ ಅಂತರ ವಿಶ್ವವಿದ್ಯಾಲಯ ಪಂದ್ಯಾಟ : ಗುಲ್ಬರ್ಗಾ ವಿವಿಯ ಹ್ಯಾಂಡ್‌ಬಾಲ್ ತಂಡ ಭಾಗಿ




ಕಲಬುರಗಿ,ಮಾ.16-

ತಮಿಳುನಾಡಿನ ವೆಲ್ಲೂರು ಇನ್ಸ್ಟ್ಯೂಟ್ ಆಫ್ ಟೆಕ್ನಾಲಜಿ (ವಿಐಟಿ) ಸಂಸ್ಥೆಯಲ್ಲಿ ಮಾ.17 ರಿಂದ ಮಾ. 21ರವರೆಗೆ ನಡೆಯಲಿರುವ ದಕ್ಷಿಣ ವಲಯ ಅಂತರ ವಿಶ್ವವಿದ್ಯಾಲಯಗಳ ಹ್ಯಾಂಡ್‌ಬಾಲ್ ಪುರುಷ ಕ್ರೀಡಾ ಪಂದ್ಯಾಟದಲ್ಲಿ ಗುಲ್ಬರ್ಗಾ ವಿಶ್ವವಿದ್ಯಾಲಯದ ದೈಹಿಕ ಶಿಕ್ಷಣ ವಿಭಾಗದ ಹ್ಯಾಂಡ್‌ಬಾಲ್ ತಂಡ ಭಾಗವಹಿಸಲಿದೆ.

ತಂಡದ ನಾಯಕ ಪ್ರಕಾಶ ಹಾಗೂ ಸದಸ್ಯರಾದ ಪ್ರಜ್ವಲ್, ಆದತ್ಯ, ಸೋಹಾಂ, ಸನಿಕುಮಾರ, ನಿತೀನ್, ಪ್ರಜ್ವಲ್, ಅಮೋಘ ಸಿದ್ದ, ಆಷಿಪ್ ಶಹಾ, ಮಾದೇಶ, ಶಿವರಾಜ ಕಾರ್ತಿಕ ಭಾಗವಹಿಸಲಿದ್ದಾರೆ. ತಂಡದ ವ್ಯವಸ್ಥಾಪಕ/ತರಬೇತಿದಾರರಾಗಿ ಎಂಜೆಪಿ ಆರ್ಟ್ಸ್ ಕಾಲೇಜಿನ ದೈಹಿಕ ಶಿಕ್ಷಣ ಬೋಧಕ ಡಾ. ಮಧುಸೂದನ ರೆಡ್ಡಿ ತೆರಳುವರು.

ಗುಲ್ಬರ್ಗಾ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಶಶಿಕಾಂತ ಎಸ್. ಉಡಿಕೇರಿ, ಕುಲಸಚಿವ ಪ್ರೊ. ರಮೇಶ್ ಲಂಡನಕರ್, ಮೌಲ್ಯಮಾಪನ ಕುಲಸಚಿವ ಡಾ. ಎನ್.ಜಿ. ಕಣ್ಣೂರ, ದೈಹಿಕ ಶಿಕ್ಷಣ ವಿಭಾಗದ ನಿರ್ದೇಶಕ ಡಾ. ಹನುಮಂತ ಎಸ್. ಜಂಗೆ, ಯೋಗ ತಾಂತ್ರಿಕ ಸಹಾಯಕ ಡಾ. ಚಂದ್ರಕಾತ ಬಿರಾದಾರ, ಪ್ರಶಾಂತ್ ಕುಮಾರ್ ಡಿ, ಅರುಣ್ ಕುಮಾರ್ ಎಚ್ ಅವರು ತಂಡಕ್ಕೆ ಶುಭ ಹಾರೈಸಿದ್ದಾರೆ.



ಚಿರತೆ ಹೆಜ್ಜೆಗುರುತುಗಳು ಪತ್ತೆ : ಗ್ರಾಮಸ್ಥರಲ್ಲಿ ಆತಂಕ

ಕಲಬುರಗಿ,ಮಾ.16-

ಜೇವರ್ಗಿ ತಾಲೂಕಿನ ಸೊನ್ನ ಗ್ರಾಮದಲ್ಲಿ ಚಿರತೆ ಕಾಣಿಸಿಕೊಂಡಿರುವ ಘಟನೆ ಗ್ರಾಮಸ್ಥರಲ್ಲಿ ಆತಂಕ ಮೂಡಿಸಿದೆ. ತಡರಾತ್ರಿ ಗ್ರಾಮಕ್ಕೆ ನುಗ್ಗಿದ ಚಿರತೆ ಒಂದು ನಾಯಿಯ ಮೇಲೆ ದಾಳಿ ನಡೆಸಿದ ಪರಿಣಾಮ ಸ್ಥಳೀಯರು ಭಯಭೀತರಾಗಿದ್ದಾರೆ.

ಘಟನೆಯ ನಂತರ ಗ್ರಾಮಸ್ಥರು ತಕ್ಷಣವೇ ಅರಣ್ಯ ಇಲಾಖೆಗೆ ಮಾಹಿತಿ ನೀಡಿದ್ದು, ಸ್ಥಳಕ್ಕೆ ಬಂದ ಅಧಿಕಾರಿಗಳು ಪರಿಶೀಲನೆ ನಡೆಸಿದರು. ಪರಿಶೀಲನೆ ವೇಳೆ ಚಿರತೆಯ ಹೆಜ್ಜೆಗುರುತುಗಳು ಪತ್ತೆಯಾಗಿದ್ದು, ನಾಯಿಯ ಮೇಲೆ ದಾಳಿ ನಡೆಸಿದ್ದು ಚಿರತೆಯೇ ಎಂಬುದನ್ನು ಅಧಿಕಾರಿಗಳು ದೃಢಪಡಿಸಿದ್ದಾರೆ.

ಈ ಘಟನೆ ಹಿನ್ನೆಲೆಯಲ್ಲಿ ಗ್ರಾಮಸ್ಥರಲ್ಲಿ ಮತ್ತಷ್ಟು ಆತಂಕ ಉಂಟಾಗಿದ್ದು,ಕೂಡಲೇ ಚಿರತೆಯನ್ನು ಸೆರೆಹಿಡಿದು ಗ್ರಾಮಸ್ಥರ ಭದ್ರತೆ ಕಲ್ಪಿಸಬೇಕೆಂದು ಅರಣ್ಯ ಇಲಾಖೆಗೆ ಒತ್ತಾಯಿಸಿದ್ದಾರೆ.



ಡಾ.ಬಾಲಾಜಿಯರವರಿಗೆ ಸಚಿವರಿಂದ ಸನ್ಮಾನ

ರಾಯಚೂರು,ಮಾ.16-

ನಗರದ ಪಂಡಿತ್ ಸಿದ್ದರಾಮು ಜಂಬಲದಿನಿ ರಂಗಮಂದಿರದಲ್ಲಿ ನಡೆದ ಮಾತೊ ಶ್ರೀ ಮಹಾಂತಮ್ಮ ಶಿವಬಸಪ್ಪ ಗೋನಾಳ್ ಪ್ರತಿಷ್ಠಾನ ಹಾಗೂ ಪ್ರತಿಭಾ ಸುಗಮ ಸಂಗೀತ ಸಂಸ್ಥೆ 16ನೇ ವಾರ್ಷಿಕೋತ್ಸವದ ಅಂಗವಾಗಿ ನಡೆದಈ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದ ಕನ್ನಡ ಜಾನಪದ ಪರಿಷತ್ತಿನ ಕ್ರಿಯಾಶೀಲ ರಾಜ್ಯಅಧ್ಯಕ್ಷರಾದ ಡಾ. ಜಾನಪದ ಬಾಲಾಜಿಯವರನ್ನು ಕರ್ನಾಟಕ ಸರ್ಕಾರದ ಸಣ್ಣ ನೀರಾವರಿ ಮತ್ತು ವಿಜ್ಞಾನ ತಂತ್ರಜ್ಞಾನ ಇಲಾಖೆ ಸಚಿವರಾದ ಎನ್ ಎಸ್ ಬೋಸರಾಜ್ ಅವರು ಸನ್ಮಾನಿಸಿ ಗೌರವಿಸಿದರು . ಈ ಸಂದರ್ಭದಲ್ಲಿ ನಿವೃತ್ತ್ ಐಎಎಸ್ ಅಧಿಕಾರಿ ಶರಣ ಸಾಹಿತ್ಯ ಪರಿಷತ್ ರಾಜ್ಯ ಘಟಕದ ಅಧ್ಯಕ್ಷರಾದ ಸೋಮಶೇಖರ. ಚಂದ್ರಶೇಖರ್ ಪಾಟೀಲ್, ಮಿರ್ಜಾಪುರ್ ಕೆ ಶಾಂತಪ್ಪ ಪಂಡಿತ್ ನರಸಿಂಹಲು ವಡವಾಟಿ.ಅಪ್ಪಿ ಗೇರಿ ತಿಮ್ಮರಾಜು. ಜಯಂತ್ ರಾವ್ ಪತಂಗೆ ನಾಗರಾಜ್ ಮಸ್ಕಿ ಚುಕ್ಕಿ ಸುಗಪ್ಪ ಸೌಕಾರ್ ಸಂಸ್ಥೆಯ ಅಧ್ಯಕ್ಷರಾದ ಡಾ.ಶರಣಪ್ಪ ಗೋನಾಳ್. ಡಾಕ್ಟರ್ ದಂಡಪ್ಪ ಬಿರಾದಾರ. ಪ್ರತಿಭಾ ಗೋನಾಳ್ ಪಾಗುಂಟಪ್ಪ ಮಿರ್ಜಾಪುರ್ ಅಮರೇಶ್ ನಿರೂಪಕ ಮುರಳಿ ಕುಲಕರ್ಣಿ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಕೃಷ್ಣ ಶಾವಂತಗೇರಿ ಮತ್ತು ಡಾ.ಶಂಕರಗೌಡ ಎಸ್.ಪಾಟೀಲರವರ ನೇತೃತ್ವದಲ್ಲಿ ಸರ್ಕಾರಿ ನೌಕರರಿಗೆ ಇಫ್ತಿಯಾರ್ ಕೂಟ ಆಯೋಜನೆ

ರಾಯಚೂರು, ಮಾ.16:

ಪವಿತ್ರ ರಂಜಾನ್ ಹಬ್ಬದ ಪ್ರಯುಕ್ತ ಜಿಲ್ಲಾ ಸರ್ಕಾರಿ ನೌಕರರ ಸಂಘದ ರಾಯಚೂರು ಘಟಕದ ವತಿಯಿಂದ ಸರ್ಕಾರಿ ನೌಕರರಿಗೆ ಸೌಹಾರ್ದದ ಇಫ್ತಿಯಾರ್ ಕೂಟವನ್ನು ಆಯೋಜಿಸಲಾಯಿತು.

ಜಿಲ್ಲಾ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷರಾದ ಶ್ರೀ ಕೃಷ್ಣ ಶಾವಂತಗೇರಿ ಹಾಗೂ ಡಾ. ಶಂಕರಗೌಡ ಎಸ್. ಪಾಟೀಲ ಅವರ ನೇತೃತ್ವದಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ವಿವಿಧ ಇಲಾಖೆಗಳ ನಿರ್ದೇಶಕರು, ಸರ್ಕಾರಿ ನೌಕರರು ಹಾಗೂ ವಿಶೇಷವಾಗಿ ಮುಸ್ಲಿಂ ಸರ್ಕಾರಿ ನೌಕರರು ಭಾಗವಹಿಸಿದರು. ಪರಸ್ಪರ ಸಹಕಾರ ಮತ್ತು ಸಹೋದರತ್ವದ ಸಂದೇಶ ಸಾರುವ ಉದ್ದೇಶದಿಂದ ಈ ಇಫ್ತಿಯಾರ್ ಕೂಟವನ್ನು



ಆಯೋಜಿಸಲಾಗಿದೆ ಎಂದು ಸಂಘದ ಪದಾಧಿಕಾರಿಗಳು ತಿಳಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಪದಾಧಿಕಾರಿಗಳು, ಇಂತಹ ಕಾರ್ಯಕ್ರಮಗಳು ನೌಕರರ ನಡುವೆ ಸರ್ವಧರ್ಮ ಸಹಿಷ್ಣುತೆ, ಪ್ರೀತಿ, ಕರುಣೆ, ಸಹೋದರತ್ವ ಮತ್ತು ಸಮಾನತೆಯ ಮನೋಭಾವ ವೃದ್ಧಿಯಾಗಲು ನೆರವಾಗುತ್ತವೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಕಾರ್ಯದರ್ಶಿ ಭೀಮೇಶ ನಾಯಕ, ಜಿಲ್ಲಾ ಉಪಾಧ್ಯಕ್ಷರು ಅಬ್ದುಲ್ ವಾಹಿದ್, ಯಂಕಪ್ಪ ಪಿರಂಗಿ, ರಾಜ್ಯ ಪರಿಷತ್ ಸದಸ್ಯ ಎಹಾಸನ್ ಉಲ್ ಹಕ್, ಜಿಲ್ಲಾ ಖಜಾಂಚಿ ಪ್ರಸನ್ನ ಕುಮಾರ್, ಕೃಷಿ ಇಲಾಖೆ ಉಪಾಧ್ಯಕ್ಷ ಶ್ರೀನಿವಾಸ್, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ಚಂದ್ರಶೇಖರ ರೆಡ್ಡಿ, ತಾಲೂಕಾಧ್ಯಕ್ಷ ಮಲ್ಲೇಶ್ ನಾಯಕ, ಸಹ ಕಾರ್ಯದರ್ಶಿ ಈರೇಶ್ ಕೊತ್ತದೊಡ್ಡಿ, ಸಂಘಟನಾ ಕಾರ್ಯದರ್ಶಿ ರಾಘವೇಂದ್ರ (ಐಟಿಐ ಕಾಲೇಜು), ಉಪಾಧ್ಯಕ್ಷ ಕೋರೆನಲ್, ನಾಮನಿರ್ದೇಶಿತ ಉಪಾಧ್ಯಕ್ಷ ಕೆ. ರಾಮು ಗಾಣಧಾಳ, ಕಂದಾಯ ಇಲಾಖೆಯ ಸೋಹಲ್, ಜುಬೈರ್ / ಸಮನ್ವಯ ಸಮಿತಿ ಪ್ರಧಾನ ಕಾರ್ಯದರ್ಶಿ ಸಂತೋಷ ನಂದಿನಿ, ಶಿಕ್ಷಣ ಇಲಾಖೆಯ ವಸಂತ ಕುಮಾರ್, ವಾಣಿಜ್ಯ ತೆರಿಗೆ ಇಲಾಖೆಯ ಮಹಾದೇವ, ಕೃಷಿ ಇಲಾಖೆಯ ನಿಯಾಜ್ ಅಹ್ಮದ್, ಪಂಚಾಯತ್ ರಾಜ್ ಇಂಜಿನಿಯರ್ ಇಲಾಖೆಯ ನಾಗರೆಡ್ಡಿ, ಪಂಚಾಯತ್ ಇಲಾಖೆಯ ಕರೆಪ್ಪ, / ಸಮನ್ವಯ ಸಮಿತಿ ಜಿಲ್ಲಾಧ್ಯಕ್ಷ ಜಿಂದಪ್ಪ, ಜಿಲ್ಲಾಧ್ಯಕ್ಷ ಆನಂದ ಕುಮಾರ್, ತೋಟಗಾರಿಕೆ ಇಲಾಖೆಯ ಪಾಷ, ಇಲಾಖೆಯ ಸೈಯದ್ ಪೀರ್ ಖಾದ್ರಿ, ಜಿಲ್ಲಾ ಕಾರ್ಯದರ್ಶಿ ಶ್ರೀರಂಗನಾಥ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಕಾರ್ಯದರ್ಶಿ ರಾಘವೇಂದ್ರ, ತಾಲೂಕಾಧ್ಯಕ್ಷ ಗುರುರಾಜ, ಕಾರ್ಯದರ್ಶಿ ಶಿವರಾಜ, ಮುಖ್ಯಗುರುಗಳು ರಾಮಣ್ಣ ಪೂಜಾರಿ, ಈರಪ್ಪ ಕೊಂಬಿನ್, ಶಿಕ್ಷಕರಾದ ಪ್ರವೀಣ ಕುಮಾರ್ ಯರಮರಸ್, ಶರಣಪ್ಪ, ಸುರೇಶ ರಘುನಾಥನಹಳ್ಳಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಕರ್ನಾಟಕ ರಕ್ಷಣಾ ವೇದಿಕೆ (ಪ್ರವೀಣ್ ಕುಮಾರ ಶೆಟ್ಟಿ ಬಣ) ದ ತಾಲೂಕ ಘಟಕದ ವತಿಯಿಂದ ನೀರಿನ ಅರವಟಿಕೆ ಉದ್ಘಾಟನೆ



ಲಿಂಗಸಗೂರು,ಮಾ 16 .

ಕರ್ನಾಟಕ ರಕ್ಷಣಾ ವೇದಿಕೆ (ಪ್ರವೀಣ್ ಕುಮಾರ ಶೆಟ್ಟಿ ಬಣ) ದ ತಾಲೂಕ ಘಟಕದ ವತಿಯಿಂದ ಇಂದು ಸರಕಾರಿ ಸಾರ್ವಜನಿಕ ಆಸ್ಪತ್ರೆಯ ಹತ್ತಿರ ನೀರಿನ ಅರವಟಿಕೆ ಉದ್ಘಾಟನೆಯನ್ನು

ಪಾಮಯ್ಯ ಮುರಾರಿ ಗ್ಯಾರಂಟಿ ಜಿಲ್ಲಾಧ್ಯಕ್ಷರು ಹಾಗೂ ಮಹಮ್ಮದ್ ರಫೀ ಮಾಜಿ ಪುರಸಭೆ ಉಪಾಧ್ಯಕ್ಷರು ಇವರುಗಳು ನೆರವೇರಿಸಿದರು .

ಈ ಸಂದರ್ಭದಲ್ಲಿ ಕರವೇ ಅಧ್ಯಕ್ಷ ಆಂಜನೇಯ ಹೆಚ್. ಭಂಡಾರಿ, ಲಿಂಗಸಗೂರು ಸಿ ಪಿ ಐ ಹೊಸಕೇರಪ್ಪ ,ದಲಿತ ಮುಖಂಡ ರಮೇಶ್ ಗೋಸ್ಲೆ,ಕರವೇ ಉಪಾಧ್ಯಕ್ಷ ಭೀಮೇಶ್ ಎಲ್. ನಾಯಕ, ಯುವ ಮುಖಂಡ ನಾಗರಾಜ್ ತುಗ್ಗಿಗೌಡ, ಕುರುಮೇಶ್ ನಾಯಕ, ಈರಣ್ಣ ರೆಡ್ಡಿ, ಅಶೋಕ್ ನಾಯಕ, ಮೌನೇಶ್ ಬುಳ್ಳಾಪುರ,ಹಾಗೂ ಶಿವು ಪತ್ತಾರ್ ಸೇರಿದಂತೆ ಇತರರು ಉಪಸ್ಥಿತರಿದ್ದರು

ವಿಜಯನಗರ: ಬಾಲಕಿ ಸೇರಿ 13 ಜನರಿಗೆ ಕಚ್ಚಿ ಗಾಯಗೊಳಿಸಿದ ಬೀದಿ ನಾಯಿ

ವಿಜಯನಗರ: ಜಿಲ್ಲೆಯ ಕೊಟ್ಟೂರು ತಾಲೂಕಿನಲ್ಲಿ ಬೀದಿ ನಾಯಿಯೊಂದು ಕಂಡ, ಕಂಡವರಿಗೆ ಕಚ್ಚಿ ಗಾಯಗೊಳಿಸಿದೆ. ಬಾಲಕಿ ಸೇರಿದಂತೆ ಬರೋಬ್ಬರಿ 13 ಜನರಿಗೆ ನಾಯಿ ಕಚ್ಚಿದೆ. ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಗಾಯಾಳುಗಳು ಚಿಕಿತ್ಸೆ ಪಡೆಯುತ್ತಿದ್ದಾರೆ. ಈ ನಾಯಿಯನ್ನು ಸಾರ್ವಜನಿಕರು ಸಂಜೆ ವೇಳೆಗೆ ಹೊಡೆದು ಸಾಯಿಸಿದ್ದಾರೆ.

ಕುಂಬಾರ ಓಣಿ, ಅಗಡೇರ ಓಣಿ ಸೇರಿದಂತೆ ವಿವಿಧ ಬಡಾವಣೆಗಳಲ್ಲಿ ಚಿಕ್ಕಮಕ್ಕಳು ಮತ್ತು ದೊಡ್ಡವರು ನಾಯಿ ಕಡಿತಕ್ಕೆ ಒಳಗಾಗಿದ್ದಾರೆ. ಬೀದಿ ನಾಯಿಯ ಅಟ್ಟಹಾಸಕ್ಕೆ ಕೊಟ್ಟೂರು ಪಟ್ಟಣದ ಜನತೆ ಬೆಚ್ಚಿಬಿದ್ದಿದ್ದಾರೆ. ಬೀದಿ ನಾಯಿ ಕಚ್ಚಿದ ಭೀಕರ ದೃಶ್ಯಗಳು ಸಿಸಿಟಿವಿಯಲ್ಲಿ ಸೆರೆಯಾಗಿವೆ. ಇತ್ತೀಚಿಗೆ ಪಟ್ಟಣದಾದ್ಯಂತ ನಾಯಿಗಳ ಹಾವಳಿ ಹೆಚ್ಚಾಗಿದೆ.

ಮಕ್ಕಳು ಹಾಗೂ ವೃದ್ದರು ಸುಗಮವಾಗಿ ಸಂಚರಿಸಲು ಭಯಪಡುವಂತಹ ವಾತಾವರಣ ಕಂಡು ಬರುತ್ತಿದ್ದು, ರಸ್ತೆಗಳಲ್ಲಿ 15 ರಿಂದ 20 ನಾಯಿಗಳು ಗುಂಪಾಗಿ ಓಡಾಡುತ್ತ ಪಾದಚಾರಿಗಳನ್ನು ಹಾಗೂ ವಾಹನಗಳನ್ನು ಹಿಂಬಾಲಿಸುತ್ತಿವೆ. ಇದರಿಂದ ಸವಾರರು ಬಿದ್ದು ಕೈಕಾಲುಗಳನ್ನು ಮುರಿದುಕೊಂಡ ಘಟನೆಗಳು ನಡೆದಿವೆ. ಹೀಗಿದ್ದರೂ ಸ್ಥಳೀಯ ಆಡಳಿತದವರು ನಿರ್ಲಕ್ಷ್ಯತನ ತೋರುತ್ತಿದ್ದಾರೆ ಎಂದು ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಕೂಡಲೇ ಪಟ್ಟಣ ಪಂಚಾಯತ್ ಮುನ್ನೆಚ್ಚರಿಕೆ ವಹಿಸಿ ಬೀದಿ ನಾಯಿಗಳನ್ನು ನಿಯಂತ್ರಿಸಬೇಕೆಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

ಸ್ಥಳೀಯರಾದ ನಾಗರಾಜ್ ಮಾತನಾಡಿ, ಮಕ್ಕಳು ಸೇರಿದಂತೆ 13 ಜನರಿಗೆ ನಾಯಿ ಕಚ್ಚಿದೆ. ಪಟ್ಟಣ ಪಂಚಾಯತ್‌ನವರು ಯಾವುದೇ ಕ್ರಮ ಕೈಗೊಂಡಿಲ್ಲ. ಸಾರ್ವಜನಿಕ ಆಸ್ಪತ್ರೆಗೆ ಹೋದ್ರೆ ಅಲ್ಲಿ ಯಾವುದೇ ರೀತಿ ಚಿಕಿತ್ಸೆ ನೀಡಿಲ್ಲ. ಟಿಹೆಚ್‌ಒ ಪ್ರದೀಪ್ ಕುಮಾರ್ ಅವರು ಯಾವ ಕ್ರಮ ತಗೊಂಡಿಲ್ಲ. ಅವರಿಗೆ ಫೋನ್ ಮಾಡಿದ್ರು ಕೂಡ ಯಾವುದೇ ಪ್ರತಿಕ್ರಿಯೆ ನೀಡಿಲ್ಲ. ಹೀಗಾಗಿ



ಮೇಲಾಧಿಕಾರಿಗಳು ಇದರ ಬಗ್ಗೆ ಕ್ರಮ ಕೈಗೊಳ್ಳಬೇಕೆಂದು ಮನವಿ ಮಾಡಿದರು.

ಸ್ಥಳೀಯರಾದ ಮಲ್ಲಿಕಾರ್ಜುನ ಮಾತನಾಡಿ, ಪಟ್ಟಣ ಪಂಚಾಯತಿಯವರು ಸುಪ್ರೀಂ ಕೋರ್ಟ್ ಸೂಚನೆ ಇದ್ದರೂ ಈ ನಾಯಿಗಳ ಹಾವಳಿಯನ್ನು ತಪ್ಪಿಸುತ್ತಿಲ್ಲ. ಮುಂಜಾಗ್ರತೆ ವಹಿಸುತ್ತಿಲ್ಲ. ಮುಂಜಾಗ್ರತೆ ವಹಿಸುವಲ್ಲಿ ಪಟ್ಟಣ ಪಂಚಾಯತ್ ಮುಖ್ಯ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಸಂಪೂರ್ಣ ವಿಫಲರಾಗಿದ್ದಾರೆ. ನಾಯಿ ಕಡಿದಾಗ ಸರ್ಕಾರಿ ಆಸ್ಪತ್ರೆಗೆ ಹೋದ್ರೆ ಅಲ್ಲಿ ಯಾವುದೇ ರೀತಿ ಚಿಕಿತ್ಸೆ ನೀಡುತ್ತಿಲ್ಲ. ಪ್ರದೀಪ್ ಕುಮಾರ್ ಅಂತ ಟಿಹೆಚ್‌ಒ ಇದ್ದಾರೆ, ಅವರು ಹೆಸರಿಗೆ ಮಾತ್ರ ಟಿಹೆಚ್‌ಒ. ಪರಿಸ್ಥಿತಿ ಇದೇ ರೀತಿ ಮುಂದುವರೆದರೆ, ಜಿಲ್ಲಾ ಮಟ್ಟದಲ್ಲಿ ಉಗ್ರ ಪ್ರತಿಭಟನೆ ಮಾಡುತ್ತೇವೆ ಎಂದು ಎಚ್ಚರಿಕೆ ನೀಡಿದರು.

ಅಂತರರಾಷ್ಟ್ರೀಯ ಗ್ರಾಹಕರ ಹಕ್ಕುಗಳ ದಿನಾಚರಣೆ ಕಾನೂನು ಅರಿವು ನೆರವು

ಅಂಗಡಿ ಮಾಲೀಕರು ಗ್ರಾಹಕರಲ್ಲಿ ವಿಶ್ವಾಸ ಹೆಚ್ಚಿಸಿ ನ್ಯಾಯಾಧೀಶ ಆರ್ ಹೆಚ್ ಅಶೋಕ್



ಸಿರುಗುಪ್ಪ ,ಮಾ.16-

ಪ್ರತಿಯೊಬ್ಬ ಅಂಗಡಿ ಮಾಲೀಕರು ಗ್ರಾಹಕರಲ್ಲಿ ವಿಶ್ವಾಸ ಹೆಚ್ಚಿಸಬೇಕು ಗ್ರಾಹಕರು ನೀಡುವ ಮೌಲ್ಯಕ್ಕೆ ಅನುಗುಣವಾಗಿ ವಸ್ತು ಹಾಗೂ ರಶೀದಿ ನೀಡುವ ಮೂಲಕ ಅವರ ಹಿತ ಕಾಪಾಡಬೇಕು ನಿಯಮ ತಪ್ಪಿದಲ್ಲಿ ಕಾನೂನು ರೀತಿ ಅಪರಾಧವಾಗುತ್ತದೆ ಎಂದು ಜೆಎಂಎಫ್ ಸಿ ನ್ಯಾಯಾಧೀಶ ಆರ್ ಹೆಚ್ ಅಶೋಕ್ ಹೇಳಿದರು ಸಿರುಗುಪ್ಪ ನಗರದ ಅಭ ಆಂನೇಯ ಸ್ವಾಮಿ ದೇವಾಲಯದ ಸಭಾ ಭವನದಲ್ಲಿ ತಾಲೂಕು ಕಾನೂನು ಸೇವೆಗಳ ಸಮಿತಿ ವಕೀಲರ ಸಂಘ ತಾಲೂಕು ಆಡಳಿತ ಎಲ್ಲಾ ಇಲಾಖೆಗಳ ಸಹಭಾಗಿತ್ವದಲ್ಲಿ ಅಂತರರಾಷ್ಟ್ರೀಯ ಗ್ರಾಹಕರ ಹಕ್ಕುಗಳ ದಿನಾಚರಣೆ ಕಾನೂನು ಅರಿವು ಮತ್ತು ನೆರವು ಕಾರ್ಯಕ್ರಮ ಹಸಿರು ಸಸಿಗೆ ನೀರು ಹಾಕುವ ಮೂಲಕ ಉದ್ಘಾಟಿಸಿ ಅವರು ಮಾತನಾಡುತ್ತಾ ಗ್ರಾಹಕರು ಖರೀದಿಸಿದ ವಸ್ತುಗಳು ಕಳಪೆಯಾಗಿದ್ದರೆ ಗ್ರಾಹಕರ ಹಿತರಕ್ಷಣೆ ಕಾಯಿದೆ ಸದ್ಬಳಕೆ ಮಾಡಿಕೊಂಡು ಅಂಗಡಿ ಮಾಲೀಕರ ವಿರುದ್ಧ ಜಿಲ್ಲಾ ಗ್ರಾಹಕರ ಹಕ್ಕುಗಳ ಹಿತ ರಕ್ಷಣಾ ವೇದಿಕೆ ಮೂಲಕ ನ್ಯಾಯ ಪಡೆಯಬಹು ದಾಗಿದೆ ಪ್ರತಿಯೊಂದು ವಸ್ತುವಿನ ವಸ್ತುನಿಷ್ಠತೆ ಬಗ್ಗೆ ಗ್ರಾಹಕರಿಗೆ ತಿಳಿ ಹೇಳುವುದು ಮಾಲೀಕರ ಜವಾಬ್ದಾರಿಯಾಗಿದೆ ವ್ಯಾಪಾರದ ಪರವಾನಿಗೆ ಪಡೆಯುವದು ಸೇರಿ ಇತರ ನಿಯಮುಗಳನ್ನು ಕಡ್ಡಾಯವಾಗಿ ಪಾಲಿಸಬೇಕು ಅಂಗಡಿಗಳಲ್ಲಿ ಚಿಕ್ಕ ಮಕ್ಕಳನ್ನು ಕೆಲಸಕ್ಕೆ ಸೇರಿಸಿಕೊಳ್ಳುವುದು ಅಪರಾಧ ವಾಗಿದೆ ಎಂದು ಕರೆ ಕೊಟ್ಟರು ವಕೀಲರ ಸಂಘದ ತಾಲೂಕು ಅಧ್ಯಕ್ಷ ಉಪ್ಪಾರು ವೆಂಕೋಬ, ಉಪಾಧ್ಯ ಕ್ಷರು ಶರೀಫ್ ಸಾಬ್, ಕಾರ್ಯದರ್ಶಿ ಎಂ ಶಿವಕುಮಾರ ಜಂಟಿ ಕಾರ್ಯದರ್ಶಿ ಮಂಜುಳಾ, ಅಬಕಾರಿ ನಿರೀಕ್ಷಕ ಎ ಜಿ ಅಂಬಣ್ಣ, ಪಿ ಎಸ್ ಐ ಮಲ್ಲಯ್ಯ , ರಾಷ್ಟ್ರೀಯ ಸಾಕ್ಷರತಾ ಸಾಮಾಜಿಕ ಕಾರ್ಯಕರ್ತ ಅಬ್ದುಲ್ ನಬಿ, ಸಹಾಯಕ ಕೃಷಿ ನಿರ್ದೇಶಕರು ಮಂಜುನಾಥ ರೆಡ್ಡಿ, ವಕೀಲರಾದ ಮಲ್ಲಿಗೌಡರು, ವೆಂಕಟೇಶ ನಾಯಕ್, ನೆಲಗುಂ ಟಯ್ಯ, ರುದ್ರಮುನಿ ಸಾರ್ವಜನಿಕರಿದ್ದರು

ರಾಯಚೂರು ಜಿಲ್ಲೆಯಲ್ಲಿ ಖಾಲಿ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಿ, ಕನ್ನಡ ಶಾಲೆಗಳನ್ನು ಉಳಿಸಬೇಕು

ಶಿಕ್ಷಕರ ಹುದ್ದೆ ಭರ್ತಿ, ಕನ್ನಡ ನಾಮಫಲಕ ಕಡ್ಡಾಯ ಕನ್ನಡ ಸೇನೆ ಆಗ್ರಹ

ರಾಯಚೂರು,ಮಾ.16-

ರಾಯಚೂರು ಜಿಲ್ಲೆಯ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳನ್ನು ಕೂಡಲೇ ಭರ್ತಿ ಮಾಡಬೇಕು ಹಾಗೂ ಕನ್ನಡ ಮಾಧ್ಯಮ ಶಾಲೆಗಳನ್ನು ಉಳಿಸಿ ಬೆಳೆಸಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಕನ್ನಡ ಸೇನೆ ಕರ್ನಾಟಕದ ರಾಯಚೂರು ಜಿಲ್ಲಾ ಸಮಿತಿಯು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದೆ.

ಜಿಲ್ಲೆಯಲ್ಲಿ ಸುಮಾರು 1454 ಸರ್ಕಾರಿ ಪ್ರಾಥಮಿಕ ಶಾಲೆಗಳು ಹಾಗೂ 239 ಸರ್ಕಾರಿ ಪ್ರೌಢಶಾಲೆಗಳು



ಕಾರ್ಯನಿರ್ವಹಿಸುತ್ತಿದ್ದು, ಈ ಶಾಲೆಗಳು ಗ್ರಾಮೀಣ ಮತ್ತು ಬಡ ವಿದ್ಯಾರ್ಥಿಗಳಿಗೆ ಶಿಕ್ಷಣದ ಪ್ರಮುಖ ಕೇಂದ್ರಗಳಾಗಿವೆ. ಆದರೆ ಕಳೆದ ಕೆಲವು ವರ್ಷಗಳಲ್ಲಿ ಹಲವಾರು ಶಿಕ್ಷಕರು ವರ್ಗಾವಣೆಯಾಗಿ ಹೋಗಿದ್ದು, ಅವರ ಸ್ಥಾನಕ್ಕೆ ಹೊಸ ಶಿಕ್ಷಕರನ್ನು ನೇಮಕ ಮಾಡದೇ ಇರುವುದರಿಂದ ಪ್ರಸ್ತುತ ಸುಮಾರು 50 ಶೇಕಡಾ ಶಿಕ್ಷಕರ ಹುದ್ದೆಗಳು ಖಾಲಿ ಇರುವ ಪರಿಸ್ಥಿತಿ ಉಂಟಾಗಿದೆ. ಇದರಿಂದ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ದೊರಕುವುದರಲ್ಲಿ ಅಡಚಣೆ ಉಂಟಾಗುತ್ತಿದೆ ಎಂದು ಮನವಿಯಲ್ಲಿ ತಿಳಿಸಲಾಗಿದೆ.

ಶಿಕ್ಷಕರ ಕೊರತೆಯಿಂದಾಗಿ ಅನೇಕ ಪೋಷಕರು ತಮ್ಮ ಮಕ್ಕಳನ್ನು ಖಾಸಗಿ ಶಾಲೆಗಳಿಗೆ ಸೇರಿಸುವ ಪರಿಸ್ಥಿತಿ ನಿರ್ಮಾಣವಾಗಿದ್ದು, ಇದರ ಪರಿಣಾಮವಾಗಿ ಕನ್ನಡ ಮಾಧ್ಯಮ ಶಾಲೆಗಳ ಅಸ್ತಿತ್ವಕ್ಕೂ ಧಕ್ಕೆ ಉಂಟಾಗುತ್ತಿದೆ ಎಂದು ಕನ್ನಡ ಸೇನೆ ಆತಂಕ ವ್ಯಕ್ತಪಡಿಸಿದೆ.


ಇದಕ್ಕೆ ಜೊತೆಗೆ, ''ಕನ್ನಡ ಉಳಿಸಿ ಕನ್ನಡ ಬೆಳೆಸಿ'' ಎಂಬ ಘೋಷಣೆಯಡಿ ಸರ್ಕಾರಿ ಶಾಲೆಗಳಲ್ಲಿ ಶೌಚಾಲಯ, ಕುಡಿಯುವ ನೀರು, ಸ್ಮಾರ್ಟ್ ಕ್ಲಾಸ್ ಸೇರಿದಂತೆ ಮೂಲಭೂತ ಸೌಕರ್ಯಗಳನ್ನು ಅಭಿವೃದ್ಧಿಪಡಿಸಿ ವಿದ್ಯಾರ್ಥಿಗಳ ದಾಖಲಾತಿ ಹೆಚ್ಚಿಸಲು ಕ್ರಮ ಕೈಗೊಳ್ಳಬೇಕೆಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.

ಅದರೊಂದಿಗೆ ರಾಯಚೂರು ಜಿಲ್ಲೆಯ ಎಲ್ಲಾ ಸರ್ಕಾರಿ ಕಚೇರಿಗಳಲ್ಲಿ ಕನ್ನಡ ನಾಮಫಲಕಗಳನ್ನು ಕಡ್ಡಾಯವಾಗಿ ಅಳವಡಿಸಲು ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳಿಗೆ ನಿರ್ದೇಶನ ನೀಡಬೇಕು ಎಂದು ಮನವಿ ಮಾಡಲಾಗಿದೆ. ಬೇಸಿಗೆ ಕಾಲ ಪ್ರಾರಂಭವಾಗಿರುವ ಹಿನ್ನೆಲೆಯಲ್ಲಿ ಜಿಲ್ಲೆಯ ಎಲ್ಲಾ ತಾಲೂಕು ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಅಭಾವ ಉಂಟಾಗದಂತೆ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಬೇಕು ಎಂದು ಸಹ ಮನವಿಯಲ್ಲಿ ಒತ್ತಾಯಿಸಲಾಗಿದೆ. ಈ ವಿಷಯದಲ್ಲಿ ಜಿಲ್ಲಾಧಿಕಾರಿಗಳು ವೈಯಕ್ತಿಕ ಆಸಕ್ತಿ ವಹಿಸಿ ಶಿಕ್ಷಣ ಇಲಾಖೆ, ಜಿಲ್ಲಾ ಪಂಚಾಯಿತಿ ಹಾಗೂ ತಾಲೂಕು ಪಂಚಾಯಿತಿ ಅಧಿಕಾರಿಗಳಿಗೆ ಸೂಚನೆ ನೀಡಿ ಶೀಘ್ರ ಕ್ರಮ ಕೈಗೊಳ್ಳಬೇಕು ಎಂದು ಕನ್ನಡ ಸೇನೆ ಕರ್ನಾಟಕದ ರಾಯಚೂರು ಜಿಲ್ಲಾ ಅಧ್ಯಕ್ಷ ಎಂ. ಬಸವರಾಜ ತಿಳಿಸಿದ್ದಾರೆ. ಈ ಸಂದರ್ಭದಲ್ಲಿ:ಗೋವಿಂದಪ್ಪ ಚವಾಣ್,ನಾಗಪ್ಪ,ಅಮರೇಶ ನಾಯಕ,ಮಂಜುನಾಥ್,ಶಿವರಾಜ್ ಬಡಿಗೇರ್,ವೀರನಗೌಡ ರಾಮಪ್ಪ ನಾಯಕ, ಪರಶುರಾಮ ಹಾಗೂ ಸಂಘಟನೆ ಕಾರ್ಯಕರ್ತರು ಇದ್ದರು.

ದಂಪತಿಗಳನ್ನು ಒಂದುಗೂಡಿಸಿದ ರಾಷ್ಟ್ರೀಯ ಲೋಕ ಅದಾಲತ್

ಲಿಂಗಸುಗೂರು,ಮಾ.16-

ಇಂದು ನಡೆದ ರಾಷ್ಟ್ರೀಯ ಲೋಕ ಅಧಾಲತನಲ್ಲಿ ಹಿರಿಯ ಶ್ರೇಣಿ ನ್ಯಾಯಾಲಯದಲ್ಲಿ ಒಟ್ಟು ಬಾಕಿ ಇದ್ದ 2399 ಪ್ರಕರಣಗಳಲ್ಲಿ ರಾಜಿಯಾದ ಪ್ರಕರಣಗಳು : 712 ಪ್ರಕರಣಗಳು ರಾಜಿಯಾಗುವ ಮೂಲಕ ಇತ್ಯಾರ್ಥವಾಗಿವೆ ಇದರ ಒಟ್ಟು ಮೊತ್ತ 2,73,44,300/- ಇರುತ್ತದೆ. ಜೀವನಾಂಶ ಕೋರಿ ಅರ್ಜಿ ಸಲ್ಲಿಸಿದ್ದ ದಂಪತಿಗಳಿಗೆ ಮಾನ್ಯ ಹಿರಿಯ ಶ್ರೇಣಿ ನ್ಯಾಯಧೀಶರಾದ ಶ್ರೀಮತಿ ಹುಂಡಿ ಮಂಜುಳಾ ಶಿವಪ್ಪ ಇವರು ಮನಹೊಲಿಸಿ ಗಂಡ ಹೆಂಡತಿಯನ್ನು ಒಂದುಗೂಡಿಸಿದರು. ಶ್ರೀ ಅಂಬಣ್ಣ ಕೆ. ಪ್ರಧಾನ ಸಿವಿಲ ನ್ಯಾಯಧೀಶರು ಇವರು ಪ್ರಧಾನ ಸಿವಿಲ ನ್ಯಾಯಾಲದಲ್ಲಿ ಒಟ್ಟು ಬಾಕಿ ಇದ್ದ 2306 ಪ್ರಕರಣಗಳಲ್ಲಿ 874 ಪ್ರಕರಣಗಳು ರಾಜಿಯಾಗುವ ಮೂಲಕ ಇತ್ಯಾರ್ಥವಾಗಿವೆ



ಇದರ ಒಟ್ಟು ಮೊತ್ತ 95,82,551/- ಇರುತ್ತದೆ. ಮತ್ತು ಹೆಚ್ಚುವರಿ ಸಿವಿಲ ನ್ಯಾಯಾಲದಲ್ಲಿ ಒಟ್ಟು ಬಾಕಿ ಇದ್ದ 1077 ಪ್ರಕರಣಗಳಲ್ಲಿ 682 ಪ್ರಕರಣಗಳು ರಾಜಿಯಾಗುವ ಮೂಲಕ ಇತ್ಯಾರ್ಥವಾಗಿವೆ ಇದರ ಒಟ್ಟು ಮೊತ್ತ 3,22,183/- ಇರುತ್ತದೆ. ಒಟ್ಟು ಲಿಂಗಸುಗೂರು ನ್ಯಾಯಾಲಯದಲ್ಲಿ 2268 ಪ್ರಕರಣಗಳು ರಾಜಿಯಾಗಿವೆ. ಇದರ ಒಟ್ಟು ಮೊತ್ತ 3,72,49,034/- ಇರುತ್ತದೆ. ಮತ್ತು ಒಟ್ಟು ಬಾಕಿ ವ್ಯಾಜ್ಯಪೂರ್ವ ಪ್ರಕರಣಗಳು 6000 ರಲ್ಲಿ 4950 ಪ್ರಕರಣಗಳು ರಾಜಿಯಾಗುವ ಮೂಲಕ ಇತ್ಯಾರ್ಥವಾಗಿವೆ ಇದರ ಒಟ್ಟು ಮೊತ್ತ 29,65,159/- ಇರುತ್ತದೆ.

ಭೂಪನಗೌಡ ಪಾಟೀಲ್ ವಕೀಲರು, ಬಾಲರಾಜ ವಕೀಲರು, ಮಹಾಲಿಂಗಪ್ಪ ವಕೀಲರು, ಹಾಜಿಬಾಬ ವಕೀಲರು,, ನಾಗರಾಜ ಗಸ್ತಿ ವಕೀಲರು, ಕಿರಣ ಮಸ್ಕಿ ವಕೀಲರು, ಶ್ರೀಮತಿ ಮಂಜುಳಾ ವಕೀಲರು, ವೀಣಾ ಶ್ರೀ ದೇಸಾಯಿ ವಕೀಲರು, ಅಮರೇಶ ಪಾಟೀಲ್, ಶಿವಕುಮಾರ, ಈಶ್ವರ ಜಾದವ, ನಾಗರತ್ನ, ಶರಣಬಸವ, ರಾಜಶೇಖರ ಇತರರು ವಕೀಲರು ಹಾಜರಿದ್ದು

ಸಿರುಗುಪ್ಪ: ಶಾಂತಿ ಸಭೆ ಧಾರ್ಮಿಕ ಭಾವನೆಗಳಿಗೆ ಧಕ್ಕೆ ಬರದಂತೆ ಶಾಂತಿ ಸೌಹಾರ್ದದಿಂದ ರಂಜಾನ್ ಯುಗಾದಿ ಆಚರಿಸಿ

ಸಿರುಗುಪ್ಪ,ಮಾ.16-

ಧಾರ್ಮಿಕ ಭಾವನೆಗಳಿಗೆ ಧಕ್ಕೆ ಬರದಂತೆ ಎಚ್ಚರಿಕೆಯಿಂದ ರಂಜಾನ್ ಮತ್ತು ಯುಗಾದಿ ಶಾಂತಿ ಸೌಹಾರ್ದದಿಂದ ಆಚರಿಸಬೇಕು ಎಂದು ಡಿವೈಎಸ್ ಪಿ ಮಾಲತೇಶ್ ಕೋನಬೇವು ಅವರು ಹೇಳಿದರು ಒಂದೇ ಸಮಯದಲ್ಲಿ ರಂಜಾನ್ ಮತ್ತು ಯುಗಾದಿ ಹಬ್ಬ ಬಂದಿರುವುದರಿಂದ ಸಿರುಗುಪ್ಪ ನಗರದ ಪೊಲೀಸ್ ಠಾಣೆಯಲ್ಲಿ ರಂಜಾನ್ ಮತ್ತು ಯುಗಾದಿ ಹಬ್ಬಗಳ ಹಿನ್ನೆಲೆ ನಡೆದ ಶಾಂತಿ ಸಭೆ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡುತ್ತಿದ್ದರು ಹಿಂದೂ ಮುಸ್ಲಿಂ ಸಮುದಾಯದವರಿಗೆ ಪವಿತ್ರವಾದ ರಂಜಾನ್ ಮತ್ತು ಯುಗಾದಿ ಎರಡು ಹಬ್ಬಗಳನ್ನು ಪ್ರತಿಯೊಬ್ಬರು ಸಡಗರ ಸಂಭ್ರಮ ಶಾಂತಿ ಸೌಹಾರ್ದತೆಯಿಂದ ಭಾವೈಕ್ಯತೆಯಿಂದ ಆಚರಿಸೋಣ ಎಲ್ಲರಿಗೂ ಹಬ್ಬದ ಶುಭಾಶಯಗಳು ಕೋರಿದರು ಯಾವುದೇ ಕಿಡಿಗೇಡಿಗಳಿಂದ ಹರಡುವ ವದಂತಿಗಳಿಗೆ ಕಿವಿಗೊಡಬೇಡಿರಿ ರಸ್ತೆ ಸಂಚಾರ ಉಲ್ಲಂಘಿಸದೆ ನಿಯಮಾನುಸಾರ ಪಾಲಿಸಿರಿ ಅಹಿತಕರ ಘಟನೆ ಕಂಡು ಬಂದರೆ ನಿರ್ದಾಕ್ಷಿಣ್ಯ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಶಾಂತಿ ಸುವ್ಯವಸೆ ಕಾಪಾಡಲು ಪೊಲೀಸರಿಗೆ ಸಹಕರಿಸಬೇಕು ಎಂದು ಸೂಚಿಸಲಾಯಿತು ಸಾಮರಸ್ಯದಿಂದ ರಂಜಾನ್ ಯುಗಾದಿ ಹಬ್ಬಗಳನ್ನು ಆಚರಿಸುವದು ಶಾಂತಿ ಸಭೆಯ ಮುಖ್ಯ ಉದ್ದೇಶವಾಗಿದೆ ಎಂದು ಕರೆ ನೀಡಿದರು.

ರಾಷ್ಟ್ರೀಯ ಹಬ್ಬಗಳ ಆಚರಣೆ ಶಾಂತಿ ಸಭೆಯ ಸದಸ್ಯರು ಸಮಾಜ ಸುಧಾ ರಕ ಅಲ್ ಹಾಜ್ ಅಬುಲ್ ನಬಿ ಚಿಸ್ತಿ ನಿಜಾಮಿ, ಖತೀಬ್ ಜಹೀರುದ್ದೀನ್ ಬಾಬು, ಸೌದಾಗರ್ ಜುಮ್ಮ ಸುನ್ನಿ ಮಸ್ಜಿದ್ ನಿಕಟ ಪೂರ್ವ ಅಧ್ಯಕ್ಷರು ಹಾಜಿ ಹಂಡಿ ಹುಸೇನ್ ಬಾಷಾ, ಸಾಮಾಜಿಕ ಕಾರ್ಯಕರ್ತ ಡಾ ಮಹಮ್ಮದ್ ಅಲಿ, ಮಹಮ್ಮದ್ ನೌಶಾದ್



ಅಲಿ, ಲತೀಫ್ ಭಾಯಿ ಮೊಹಮ್ಮದ್ ಆಜಮ್ ಲಾಡ್ ಖಾನ್ ಮಸೀದಿಯ ಅಧ್ಯಕ್ಷರು ಎಸ್ ಮೊಹಮ್ಮದ್ ಫಜಲ್ ಹಾಜಿ ಚೌದ್ರಿ ಖಾಜಾ ಸಾಬ್ ಮುಲ್ಲಾ ಕಲೀಮ್ ಮಕಾಂದಾರ್ ಮೆಹಬೂಬ್ ಬಾಷಾ ದೇಶನೂರು ಹಾಜಿ ಹೋಟೆಲ್ ಅಬುಲ್ ಗಫೂರ್ ಇಬ್ರಾಹಿಂಪುರ್ ಹಮೀದ್ ಸಾಬ್ ಇನಾಯತ್ ಮುಲ್ಲಾ ದಾದಾ ಖಲಂದರ್ ವಕೀಲ್ ಅಮೀರ್ ಬಾಷಾ ಬಿ ಹಬೀಬ್ ಸಾಬ್ ಮೋದಿನ್ ಡೊಳ್ಳಿ ವಲಿ ರಜಾ ಮಹಮ್ಮದ್ ಅಜೀಮ್ ಅಂಜಾಲ್ ಖಾಜಾ ದೇಶನೂರು ಖಾಜಾ ಅಹಮ್ಮದ್ ಶರೀಫ್ ಡಿ ಮೌಲಾಲಿ ವೈ ಎಂ ಖಾದರ್ ಸಮೀರ್ ಕೆ. ಬೆಳಗಲ್ ಖಾಜಾಸಾಬ್ ಸಿಪಿಐ ಹನುಮಂತಪ್ಪ ಅವರು ಪಿಎಸ್ಐ ಪರಶುರಾಮ್ ಅವರು ಸರ್ವರನ್ನು ಸ್ವಾಗತಿಸಿ ಮಾತನಾಡಿದರು ಪಿಎಸ್ ಐ ಮಲ್ಲಯ್ಯ ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಹಿರಿಯರು ಯುವಕರು ಭಾಗವಹಿಸಿ ಸಲಹೆ ಸೂಚನೆ ನೀಡಿದರು.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR